# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 86 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 18–10–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00

Volume - 02 Issue - 86 | RNI No: KARKAN/2023/88462 | Chitradurga | Date: 18-10-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಅದ್ದೂರಿಯಾಗಿ ನಡೆದ ವಾಲ್ಮೀಕಿ ಜಯಂತಿ ಮೆರವಣಿಗೆ : ನೂರಾರು ಜನ ಭಾಗಿ 2

ಮಹರ್ಷಿ ವಾಲ್ಮೀಕಿಯವರ ಆದರ್ಶಗಳೇ ನಾಯಕ ಸಮುದಾಯಕ್ಕೆ ಸ್ಪೂರ್ತಿ: ಶಾಸಕ 3

ರಾಮನನ್ನು ನೆನೆಯುವ ಮುನ್ನ ಮಹರ್ಷಿ ವಾಲ್ಮೀಕಿ ನೆನೆಯಿರಿ: ಗೋವಿಂದಪ್ಪ 4



ಸುದ್ದಿ, ಜಾಹಿರಾತಿಗೆ 9686622252


**ಫಾಸ್ಟ್ ನ್ಯೂಸ್**

## ಮಳೆ ವರದಿ: ಚಿತ್ರದುರ್ಗ ಜಿಲ್ಲೆಯಲ್ಲಿ 17.9 ಮಿ.ಮೀ ಮಳೆ

» **ಚಿತ್ರದುರ್ಗ**

ಬುಧವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 17.9 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 24.3 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 30.1 ಹಿರಿಯೂರು ತಾಲ್ಲೂಕು 16.7 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 10.7 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 9.2 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 8.3 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 23.3 ಮಿ.ಮೀ, ನಾಯಕನಹಟ್ಟಿ 25 ಮಿ.ಮೀ, ಪರಶುರಾಂಪುರ 30.1 ಮಿ.ಮೀ, ತಳಕು 19.1 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 15.5 ಮಿ.ಮೀ, ಭರಮಸಾಗರ 52.7 ಮಿ.ಮೀ, ಹಿರೇಗುಂಟನೂರು 29.7 ಮಿ.ಮೀ, ತುರುವನೂರು 31.7 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 12.7 ಮಿ.ಮೀ, ಐಮಂಗಲ 17.9 ಮಿ.ಮೀ, ಧರ್ಮಪುರ 27.8 ಮಿ.ಮೀ, ಜವನಗೊಂಡನಹಳ್ಳಿ 7 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 10.7 ಮಿ.ಮೀ, ಬಿ.ದುರ್ಗ 9.8 ಮಿ.ಮೀ, ರಾಮಗಿರಿ 16.3 ಮಿ.ಮೀ, ತಾಳ್ಯ 7 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 7.1 ಮಿ.ಮೀ, ಮಾಡದಕೆರೆ 8.4 ಮಿ.ಮೀ, ಮತ್ತೋಡು 12.7 ಮಿ.ಮೀ, ಶ್ರೀರಾಂಪುರ 10.2 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 6.7 ಮಿ.ಮೀ ಹಾಗೂ ದೇವಸಮುದ್ರದಲ್ಲಿ 10 ಮಿ.ಮೀ ಮಳೆಯಾಗಿದೆ. 1 ಜೀವಹಾನಿ, 59 ಮನೆಗಳು ಭಾಗಶಃ ಹಾನಿ: ಬುಧವಾರ ರಾತ್ರಿ ಸುರಿದ ಮಳೆಗೆ ಚಿತ್ರದುರ್ಗ ತಾಲ್ಲೂಕಿನಲ್ಲಿ 1 ಜೀವಹಾನಿ ಹಾಗೂ ಜಿಲ್ಲೆಯಾದ್ಯಂತ 59 ಮನೆಗಳು ಭಾಗಶಃ ಹಾನಿಯಾಗಿವೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

# ತಳ ಸಮುದಾಯದವರು ಸಂಸ್ಕೃತ ಕಲಿತು ಕಾವ್ಯ ರಚಿಸಿದರೆ ಅಂಥವರ ಬಗ್ಗೆ ಕಥೆ ಕಟ್ಟುತ್ತಾರೆ

**ಶಾಕುಂತಲಾ ಬರೆದ ಕಾಳಿದಾಸ ಕುರುಬ. ಮಹಾಭಾರತ ಬರೆದ ವ್ಯಾಸರು ಬೆಸ್ತರು. ರಾಮಾಯಣ ಬರೆದ ಮಹರ್ಷಿ ವಾಲ್ಮೀಕಿ ಸಮುದಾಯದವರು: ಸಿಎಂ ಸಿದ್ದರಾಮಯ್ಯ**

**ಎಲ್ಲಾ ಎಸ್‌ಟಿ ವಸತಿ ಶಾಲೆಗಳಿಗೆ, ರಾಯಚೂರು ವಿವಿಗೆ ವಾಲ್ಮೀಕಿ ಹೆಸರು ಇಡಲಾಗುವುದು: ಸಿ.ಎಂ.ಸಿದ್ದರಾಮಯ್ಯ ಮಹತ್ವದ ಘೋಷಣೆ**





» **ಬೆಂಗಳೂರು**

ಎಲ್ಲಾ ಎಸ್ ಟಿ ವಸತಿ ಶಾಲೆಗಳಿಗೆ ಮತ್ತು ರಾಯಚೂರು ವಿವಿಗೆ ಮಹರ್ಷಿ ವಾಲ್ಮೀಕಿ ಹೆಸರು ಇಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಘೋಷಣೆ ಮಾಡಿದರು.

ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಶ್ರೀ ವಾಲ್ಮೀಕಿ ಜಯಂತಿ ಪ್ರಯುಕ್ತ ಬ್ಯಾಂಕ್ವೆಟ್ ಹಾಲ್ ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ, ಐದು ಮಹನೀಯರಿಗೆ ವಾಲ್ಮೀಕಿ ಪ್ರಶಸ್ತಿ ವಿತರಿಸಿ ಮಾತನಾಡಿದರು.

ಶಾಕುಂತಲಾ ನಾಟಕ ಬರೆದ ಕಾಳಿದಾಸ ಕುರುಬ ಸಮುದಾಯದವರು. ಮಹಾಭಾರತ ಬರೆದ ವ್ಯಾಸರು ಬೆಸ್ತ ಸಮುದಾಯದವರು.ರಾಮಾಯಣಬರೆದ ಮಹರ್ಷಿ ವಾಲ್ಮೀಕಿ ಸಮುದಾಯದವರು. ದರೋಡೆ ಮಾಡ್ಕೊಂಡು ಓಡಾಡುತ್ತಿದ್ದ ವಾಲ್ಮೀಕಿ ರಾಮಾಯಣ ಬರೆಯಲು ಸಾಧ್ಯವಾ ಎಂದು ಕತೆ ಕಟ್ಟಿಬಿಟ್ಟರು. ತಳ ಸಮುದಾಯಗಳು, ಶೂದ್ರರು ಶಿಕ್ಷಣ, ಸಂಸ್ಕೃತ ಕಲಿಯುವುದು ನಿಷಿದ್ಧವಾಗಿತ್ತು. ಇಂಥಾ ಹೊತ್ತಲ್ಲೇ ಸಂಸ್ಕೃತ ಕಲಿತು ಶ್ಲೋಕಗಳ ಮೂಲಕ ಜಗತ್ಪ್ರಸಿದ್ಧ ರಾಮಾಯಣ ಮಹಾಕಾವ್ಯ ಬರೆದರಲ್ಲಾ ಇದು ಹೆಮ್ಮೆಯ ಮತ್ತು ಮಾದರಿ ಸಂಗತಿ ಎಂದರು.

ಶಿಕ್ಷಣ ಕಲಿಯುವ ಅವಕಾಶ ಸಿಕ್ಕಾಗ ಇವರೆಲ್ಲಾ ಕಲಿತರು. ಬರೆದರು. ಜಗತ್ತಿಗೇ ಪ್ರೇರಣೆ ಆದರು. ವಾಲ್ಮೀಕಿ ಅವರು ಸಮಪಾಲು, ಸಮಬಾಳು, ಸಮಾನ ಅವಕಾಶಗಳ ಬಗ್ಗೆ ಹೇಳಿದ್ದರು. ರಾಮಾಯಣದ ರಾಮರಾಜ್ಯ ಅಂದರೆ ಸಮಪಾಲಿನ ಸಮಾನ ಅವಕಾಶಗಳ ರಾಜ್ಯ ಎಂದರ್ಥ ಎಂದರು.

ರಾಮನ ಮಕ್ಕಳಾದ ಲವ ಕುಶರಿಗೆ ಆಶ್ರಯ ನೀಡಿ ಶಿಕ್ಷಣ ಕೊಟ್ಟಿದ್ದು ವಾಲ್ಮೀಕಿ ಮಹರ್ಷಿಗಳು. ವಾಲ್ಮೀಕಿ ವಿಶ್ವಮಾನವರಾಗಿದ್ದರು ಎನ್ನುವುದಕ್ಕೆ ಇದು ಸಣ್ಣ ಉದಾಹರಣೆ ಎಂದರು.

SCSP/TSP ಮೂಲಕ SC/ST ಸಮುದಾಯದ ಜನಸಂಖ್ಯೆಗೆ ಅನುಗುಣವಾಗಿ ಹಣವನ್ನು ಆಯವ್ಯಯದಲ್ಲಿ ಮೊದಲಿಗೆ ಮೀಸಲಿಟ್ಟಿದ್ದು ನಮ್ಮ ಸರ್ಕಾರ. ತಳ ಸಮುದಾಯಗಳಿಗೆ ವಸತಿ ಶಾಲೆಗಳನ್ನು ಮೊದಲು ಆರಂಭಿಸಿದ್ದು ನಾನು. ಪ್ರತೀ ಹೋಬಳಿಗೂ ಒಂದು ವಸತಿ ಶಾಲೆ ಮಾಡಿಯೇ ಮಾಡ್ತೇನಿ ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಪುನರುಚ್ಚರಿಸಿದರು.

ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರವಾಗಲೀ, ಬಿಜೆಪಿ ಅಧಿಕಾರದಲ್ಲಿರುವ ಒಂದೇ ಒಂದು ರಾಜ್ಯದಲ್ಲಾಗಲೀ SCSP/ TSP ಕಾಯ್ದೆಯನ್ನು ಜಾರಿಗೆ ತಂದಿಲ್ಲ ಏಕೆ ಎಂದು ಸಿಎಂ ಪ್ರಶ್ನಿಸಿದರು.

ಬರೀ ಬಾಯಿ ಮಾತಲ್ಲಿ ಸಮಾನತೆ ಬರಲ್ಲ. ಆರ್ಥಿಕ ಕಾರ್ಯಕ್ರಮಗಳನ್ನು ಜಾರಿಗೆ ತರಬೇಕು ಎಂದು ಬಿಜೆಪಿ ಬಂಡವಾಳವನ್ನು ಬಿಚ್ಚಿಟ್ಟರು.

ಆರ್ಥಿಕ ಮತ್ತು ಸಾಮಾಜಿಕ ಅಸಮಾನತೆ ಹೋಗದಹೊರತು ಸಮಾನತೆ ಬರುವುದಿಲ್ಲ ಎನ್ನುವ ಎಚ್ಚರಿಕೆಯನ್ನು ಬಾಬಾ ಸಾಹೇಬ್ ಅಂಬೇಡ್ಕರ್ ನೀಡಿದ್ದಾರೆ.

ನಮ್ಮ ಸರ್ಕಾರ ಎಲ್ಲಾ ಧರ್ಮ, ಎಲ್ಲಾ ಜಾತಿಯ ಬಡವರಿಗೆ ಆರ್ಥಿಕ ಶಕ್ತಿ ಕೊಡಲು ಗ್ಯಾರಂಟಿಗಳನ್ನು ಜಾರಿಗೆ ತಂದರೆ ಇದನ್ನು ವಿರೋಧಿಸಿದವರು ಬಿಜೆಪಿಯವರು. ಆದ್ದರಿಂದ ಗ್ಯಾರಂಟಿಗಳ ಫಲಾನುಭವಿಗಳು ಬಿಜೆಪಿಯವರಿಗೆ ಸರಿಯಾಗಿ ಪಾಠ ಹೇಳಿ. ಬಿಜೆಪಿಯವರ ಸುಳ್ಳುಗಳಿಗೆ ತಲೆ ಕೊಟ್ಟು ಮೋಸ ಹೋಗದೆ ಬಿಜೆಪಿ ಸುಳ್ಳುಗಳಿಗೆ ಸರಿಯಾದ ಉತ್ತರ ಕೊಡಿ. ಬಡ್ತಿಯಲ್ಲಿ ಮೀಸಲಾತಿಯನ್ನು ಸುಪ್ರೀಂಕೋರ್ಟ್ ಎತ್ತಿ ಹಿಡಿಯಿತು. ಅದನ್ನು ಮೊದಲಿಗೆ ಜಾರಿಗೆ ತಂದಿದ್ದು ನಮ್ಮ ಸರ್ಕಾರ. ಗುತ್ತಿಗೆಯಲ್ಲಿ ಮೀಸಲಾತಿ ಮೊದಲಿಗೆ ತಂದಿದ್ದು ನಮ್ಮ ಸರ್ಕಾರ. ಇದನ್ನು ನಾಡಿನ ಜನತೆ ಅರ್ಥಮಾಡಿಕೊಳ್ಳಬೇಕು ಎಂದರು.

ನಾನು ಹೇಳಿದ್ದೀನಿ ಎನ್ನುವ ಕಾರಣಕ್ಕೆ ನೀವು ಇದನ್ನೆಲ್ಲಾ ನಂಬಬೇಡಿ. ಸತ್ಯ, ಸುಳ್ಳನ್ನು ಪರಾಮರ್ಶಿಸಿ, ವಿವೇಚಿಸಿ. ಸತ್ಯವನ್ನು ಧೈರ್ಯವಾಗಿ–ಬಹಿರಂಗವಾಗಿ ಮಾತಾಡುವ ಧೈರ್ಯವನ್ನು ದಲಿತ, ಹಿಂದುಳಿದ, ಅಲ್ಪಸಂಖ್ಯಾತ ಸಮುದಾಯಗಳು ಬೆಳೆಸಿಕೊಳ್ಳಬೇಕು. ಇದೇ ಮಹರ್ಷಿ ವಾಲ್ಮೀಕಿ ಅವರಿಗೆ ನಾವು–ನೀವು ಸಲ್ಲಿಸುವ ಗೌರವ ಎಂದರು.

ರಾಜನಹಳ್ಳಿ ವಾಲ್ಮೀಕಿ ಸಮುದಾಯದ ಮಠದ ಜಗದ್ಗುರು ಪ್ರಸನ್ನಾ ನಂದಪುರಿ ಶ್ರೀಗಳ ದಿವ್ಯ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರಾದ ಸತೀಶ್ ಜಾರಕಿಹೊಳಿ, ಕೆ.ಎನ್.ರಾಜಣ್ಣ, ಹೆಚ್.ಕೆ.ಪಾಟೀಲ್,ಮಾಜಿ ಸಂಸದರಾದ ವಿ.ಎಸ್.ಉಗ್ರಪ್ಪ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಸವನಗೌಡ ದದ್ದಲ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಎಐಸಿಸಿ ಅಧ್ಯಕ್ಷರಾದ ಅಜಯ್ ಸಿಂಗ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಹಾಗೂ ವಿಧಾನಸಭೆ ಮತ್ತು ವಿಧಾನಪರಿಷತ್ ಸದಸ್ಯರುಗಳು ಸೇರಿ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಕಿಲಾರಿ ಬೊಮ್ಮಯ್ಯ, ರಾಜಶೇಖರ, ಡಾ.ರತ್ನಮ್ಮ ಸೇರಿ ಐವರು ಸಾಧಕರಿಗೆ ವಾಲ್ಮೀಕಿ ಪ್ರಶಸ್ತಿ

» **ಬೆಂಗಳೂರು**

2024 ನೇ ಸಾಲಿಗೆ ಶ್ರೀ ಮಹರ್ಷಿ ವಾಲ್ಮೀಕಿ ಅವರ ಸ್ಮರಣಾರ್ಥ ಪರಿಶಿಷ್ಟ ವರ್ಗದ ಏಳ್ಗೆಗರ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಗುರುತರ ಸೇವೆಗೈದ ಐವರು ಸಾಧಕರಿಗೆ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರು ಪ್ರಕಟಿಸಿದ್ದಾರೆ.

ಬೆಂಗಳೂರು ವಿಭಾಗ: ಶ್ರೀ ಕಿಲಾರಿ ಜೋಗಯ್ಯ ಬಿನ್ ಕಿಲಾರಿ ಬೋರಯ್ಯ ಗಡ್ಡದಾರಹಟ್ಟಿ, ಚಳ್ಳಕೆರೆ ತಾಲ್ಲೂಕು ಚಿತ್ರದುರ್ಗ ಜಿಲ್ಲೆಯವರಾದ ಇವರು ಕಿಲಾರಿ ವೃತ್ತಿಯ ಮೂಲಕ ಸಮಾಜದ ಒಳಿತಿಗಾಗಿ ಸಲ್ಲಿಸಿದ್ದಾರೆ. ದೇವರ ಎತ್ತುಗಳ ರಕ್ಷಣೆ, ಜಾನುವಾರುಗಳ ಪೋಷಣೆ, ಸ್ಥಳೀಯ ಬುಡಕಟ್ಟು ಸಮುದಾಯದ ಸಂಸ್ಕೃತಿಯ ಸಂರಕ್ಷಣೆ, ಜಾನುವಾರುಗಳ ಮಹತ್ವ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ, ಬುಡಕಟ್ಟು ಸಂಸ್ಕೃತಿಯ ಆಚರಣೆಯ ಮೂಲಕ ಜಾನುವಾರುಗಳ ಸಂತತಿಯ ಸಂರಕ್ಷಣೆ ಮಾಡುತ್ತಿದ್ದಾರೆ. ಸ್ಥಳೀಯ ಗ್ರಾಮೀಣ ಸೊಗಡ ಉಳಿಸಿ ಬೆಳೆಸಲು ಶ್ರಮಿಸುತ್ತಿದ್ದಾರೆ. ಇವರ ಅನುಪಮ ಸಮಾಜ ಸೇವೆಯನ್ನು ಗುರುತಿಸಿ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

**ಮೈಸೂರು ವಿಭಾಗ: ಡಾ. ರತ್ನಮ್ಮ ಎಸ್.:** ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ಮದ್ದೂರು ಹೋಬಳಿಯ ಮದ್ದೂರು ಕಾಲೋನಿಯವರಾದ ಡಾ. ರತ್ನಮ್ಮ ಎಸ್. ಅವರು ಬುಡಕಟ್ಟು ಮಕ್ಕಳ ಶಿಕ್ಷಣಕ್ಕಾಗಿ ಹೋರಾಟ ಮಾಡಿದ್ದಾರೆ. ಬುಡಕಟ್ಟು ಸಮುದಾಯಗಳಿರುವ ಪ್ರದೇಶಗಳಿಗೆ ಭೇಟಿ ನೀಡಿ, ಸಮುದಾಯದ ಮನವೊಲಿಸಿ ಮಕ್ಕಳಿಗೆ ಶಾಲಾ ಕಾಲೇಜುಗಳಿಗೆ ದಾಖಲಿಸುವುದು, ಸಮುದಾಯದ ಶಿಕ್ಷಣಕ್ಕೆ ಪೂರಕವಾದ ಕಾರ್ಯಕ್ರಮಗಳನ್ನು ಆಯೋಜಿಸುವುದು, ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವುದು. ಸಮುದಾಯದವರಿಗೆ ಆರೋಗ್ಯ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವುದು, ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸುವುದು. ಸಮುದಾಯದ ಕಲೆ, ಕುಲ ಕಸುಬು, ಸಂಸ್ಕೃತಿಯ ಸಂರಕ್ಷಿಸುವುದು ಹಾಗೂ ಪೋಷಿಸುವ ನಿಟ್ಟಿನಲ್ಲಿ ಶ್ರಮಿಸಿದ್ದಾರೆ. ಇವರ ಅನುಪಮ ಸೇವೆಯನ್ನು ಗುರುತಿಸಿ, ಇವರಿಗೆ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

**ಬೆಳಗಾವಿ ವಿಭಾಗ: ಶ್ರೀ ರಾಜಶೇಖರ ತಳವಾರ:** ’ಳಗಾವಿಯ ಗಾಂಧಿನಗರದವರಾದ ಇವರು ಗುಡ್ಡಗಾಡು ಪ್ರದೇಶಗಳಲ್ಲಿರುವ ಬುಡಕಟ್ಟು ಸಮುದಾಯದ ಜನರಿಗೆ ಶಿಕ್ಷಣ, ಆರೋಗ್ಯ, ನೈರ್ಮಲ್ಯ ಕುರಿತು ಜಾಗೃತಿ ಮೂಡಿಸುತ್ತಿದ್ದಾರೆ. ಬುಡಕಟ್ಟು ಸಮುದಾಯವು ವಾಸಿಸುವ ಮೂಲಭೂತ ಸೌಕರ್ಯಗಳಿಲ್ಲದ ಗುಡ್ಡಗಾಡು ಪ್ರದೇಶಗಳ ಬಗ್ಗೆ ವಿವಿಧ ಇಲಾಖೆಗಳ ಗಮನಕ್ಕೆ ತಂದು ಆ ಪ್ರದೇಶಗಳಿಗೆ ಮೂಲಭೂತ ಸೌಕರ್ಯ ದೊರಕುವಂತೆ ಹಾಗೂ ಬುಡಕಟ್ಟು ಸಮುದಾಯವನ್ನು ಮುಖ್ಯವಾಹಿನಿಗೆ ತರಲು ಶ್ರಮಿಸಿದ್ದಾರೆ. ಶಿಕ್ಷಣ ಕುರಿತು ಜಾಗೃತಿ ಮೂಡಿಸುವುದು, ಶಿಕ್ಷಣಕ್ಕೆ ಸಂಬಂಧಿಸಿದ ಸಮ್ಮೇಳನಗಳು, ಶಿಬಿರ, ತರಬೇತಿಗಳನ್ನು ಆಯೋಜಿಸುವುದು. ಸಮುದಾಯದ ವಿದ್ಯಾರ್ಥಿಗಳ ಶಿಕ್ಷಣ ಮುಂದುರೆಯಲು ಸರ್ಕಾರದ ನೆರವು ದೊರಕಿಸುವುದು, ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಶ್ರಮಿಸುತ್ತಿದ್ದಾರೆ. ಸಮಾಜದ ಒಳಿತಿಗಾಗಿ ಸಲ್ಲಿಸಿರುವ ಸಮಾಜ ಸೇವೆಯನ್ನು ಗುರುತಿಸಿ ಇವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

**ಬೆಂಗಳೂರು ಕೇಂದ್ರ: ಶ್ರೀ ಕೆ. ಎಸ್. ಮೃತ್ಯುಂಜಯ:** ಬೆಂಗಳೂರು ವಾಸಿಯಾದ ಶ್ರೀ ಕೆ.ಎಸ್. ಮೃತ್ಯುಂಜಯ ಅವರು ಪರಿಶಿಷ್ಟ ಪಂಗಡದ ಸಮುದಾಯದ ಶೈಕ್ಷಣಿಕ, ಆರ್ಥಿಕ ಆಭಿ□□ದ್ಧಿ ಹಾಗೂ ಕೌಶಲ್ಯ ತರಬೇತಿ ಕಾರ್ಯಕ್ರಮಗಳ ಕುರಿತು ಜಾಗೃತಿ ಮೂಡಿಸುವ ಮೂಲಕ ಸರ್ಕಾರದ ಸೌಲಭ್ಯಗಳನ್ನು ಸಮುದಾಯ ದವರಿಗೆ ದೊರಕಿಸಲು ಶ್ರಮಿಸಿದ್ದಾರೆ. ಸಮುದಾಯವನ್ನು ಸಂಘಟಿಸುವ ನಿಟ್ಟಿನಲ್ಲಿ ಶ್ರಮಿಸಿದ್ದಾರೆ. ಬುಡಕಟ್ಟು ಸಮುದಾಯಗಳ ಅಭಿ□□ದ್ಧಿಗೆ ಪೂರಕ ಚಟುವಟಿಕೆಗಳನ್ನು ಕೈಗೊಂಡಿದ್ದಾರೆ. ಸಮುದಾಯದ ಅಭಿವೃದ್ಧಿಗೆ ಪೂರಕವಾಗಿ ಕಾರ್ಯಾಗಾರ, ಶಿಬಿರ, ಚಿಂತನ–ಮಂಥನ ಕಾರ್ಯಕ್ರಮಗಳಲ್ಲಿ ಸಕ್ರೀಯವಾಗಿ ಪ್ರತಿನಿಧಿಸುತ್ತಾರೆ. ಇವರ ಅನುಪಮ ಸೇವೆಯನ್ನು ಗುರುತಿಸಿ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

**ಕಲಬುರ್ಗಿ ವಿಭಾಗ: ಶ್ರೀಮತಿ ರತ್ನಮ್ಮ ಬಿ. ಸೋಗಿ:** ವಿಜಯನಗರ ಜಿಲ್ಲೆ ಹರಪನಹಳ್ಳಿಯವರಾದ ಇವರು ವೃತ್ತಿ ರಂಗಭೂಮಿ ಖ್ಯಾತ ಕಲಾವಿದರಾಗಿದ್ದು, ಅದರಲ್ಲೂ ಗ್ರಾಮೀಣ ಪ್ರದೇಶದಲ್ಲಿ ರಂಗಭೂಮಿ ಕ್ಷೇತ್ರದಲ್ಲಿ ಹೆಸರಾಂತ ಕಲಾವಿದರಾಗಿದ್ದಾರೆ. ಐತಿಹಾಸಿಕ, ಪೌರಾಣಿಕ, ಮತ್ತು ಸಾಮಾಜಿಕ ನಾಟಕಗಳಲ್ಲಿ ಅಭಿನಯಿಸುವ ಮೂಲಕ ಗ್ರಾಮೀಣ ಪ್ರದೇಶದಲ್ಲಿ ರಂಗ ಭೂಮಿ ಕ್ಷೇತ್ರದ ಉಳಿವು ಹಾಗೂ ಬೆಳವಣಿಗಾಗಿ ಅಪಾರವಾಗಿ ಶ್ರಮಿಸಿದ್ದಾರೆ. ಅನೇಕ ನಾಟಕಗಳಲ್ಲಿ ಅಭಿನಯಿಸುವ ಮೂಲಕ ಸಮಾಜದ ಒಳಿತಿಗಾಗಿ ಹಾಗೂ ಅನೇಕ ಸಾಮಾಜಿಕ ಪಿಡುಗುಗಳ ನಿವಾರಣೆಗಾಗಿ ತಮ್ಮ ಅಭಿನಯದ ಮೂಲಕ ಜಾಗೃತಿ ಮೂಡಿಸಿದಾರೆ. ಇವರು ಕನ್ನಡ ರಂಗಭೂಮಿಗೆ ಸಲ್ಲಿಸಿದ ಗಣನೀಯ ಕಲಾ ಸೇವೆಯನ್ನು ಗುರುತಿಸಿ ಇವರನ್ನು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಬೆಂಗಳೂರು , ಮೈಸೂರು, ಬೆಳಗಾವಿ, ಕಲಬುರಗಿ ಕಂದಾಯ ವಿಭಾಗಗಳು ಹಾಗೂ ಬೆಂಗಳೂರು ಕೇಂದ್ರ ಸ್ಥಾನದಿಂದ ತಲಾ ಒಬ್ಬರಂತೆ ಒಟ್ಟು ಐದು ಸಾಧಕರಿಗೆ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಪ್ರದಾನ ಮಾಡಲಾಗುವುದು. ಈ ಸಾಧಕರಿಗೆ ತಲಾ 20 ಗ್ರಾಮ ಬಂಗಾರದ ಪದಕ ಹಾಗೂ ಐದು ಲಕ್ಷ ರೂ. ನಗದು ನೀಡಿ ಗೌರವಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. 2024ನೇ ಸಾಲಿಗೆ ಶ್ರೀ ಮಹರ್ಷಿ ವಾಲ್ಮೀಕಿ ಇವರ ಸ್ಮರಣಾರ್ಥ ನೀಡುವ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ವಿವಿಧ ಕ್ಷೇತ್ರಗಳಲ್ಲಿ ಸಾಧಕರನ್ನು ಆಯ್ಕೆ ಮಾಡಲು ಶ್ರೀ ಕೆ. ಹೆಚ್.ಮಲ್ಲೇಶಪ್ಪ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನೇತೃತ್ವದಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿತ್ತು. ಈ ಸಮಿತಿಯು ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಐವರು ಗಣ್ಯರನ್ನು ಗುರುತಿಸಿ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲು ಸರ್ಕಾರಕ್ಕೆ ಶಿಫಾರಸು ಮಾಡಿತ್ತು.

## ಸರ್ಕಾರ ನನ್ನ ಸೇವೆ ಗುರುತಿಸಿ ಪ್ರಶಸ್ತಿ ನೀಡಿದ್ದು ಸಂತಸ ತಂದಿದೆ



» **ಚಳ್ಳಕೆರೆ**

ಪ್ರಸ್ತುತ 2024ರ ಮಹರ್ಷಿಶ್ರೀವಾಲ್ಮೀಕಿ ಪ್ರಶಸ್ತಿಯನ್ನು ತಾಲ್ಲೂಕಿನ ನನ್ನಿವಾಳ ಪಂಚಾಯಿತಿಯ ಗಡ್ಡದಾರಹಟ್ಟಿಯ ಕಿಲಾರಿ ಜೋಗಯ್ಯನವರಿಗೆ ದೊರಕಿದ್ದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.

ಕಿಲಾರಿಜೋಗಯ್ಯ ಚಿಕ್ಕವಯಸ್ಸಿನಿಂದಲೇ ತಮ್ಮ ಆರಾಧ್ಯ ದೈವ ಎಂದೇ ನಂಬಿರುವ ನೂರಾರು ದೇವರ ಎತ್ತುಗಳ ಪಾಲನೆ, ಪೋಷಣೆ ಮಾಡುವ ಮೂಲಕ ತಮ್ಮ ಮೂಲ ಸಂಸ್ಕೃತಿ, ಜಾನುವಾರು ರಕ್ಷಣೆಯ ಕಾರ್ಯವನ್ನು ಅನೇಕ ದಶಕಗಳಿಂದ ಮಾಡುತ್ತಾ ಬಂದಿದ್ದಾರೆ. ಬಿಸಿಲು, ನೆರಳು, ಮಳೆ ಎನ್ನದೆ ದಿನದ 24 ಗಂಟೆಗಳ ಕಾಲ ದೇವರ ಎತ್ತುಗಳ ಜೊತೆಯಲ್ಲೇ ಇದ್ದು ಅವುಗಳಿಗೆ ಅಪಾಯವಾಗದಂತೆ ಜಾಗ್ರತೆವಹಿಸಿದ್ದಾರೆ. ಕಿಲಾರಿ ಜೋಗಯ್ಯನವರ ಜಾನುವಾರುಗಳ ಸಂರಕ್ಷಣೆ ಕಾರ್ಯವನ್ನು ರಾಜ್ಯವಾಲ್ಮೀಕಿ ಅಭಿವೃದ್ಧಿ ನಿಗಮ ಗುರುತಿಸಿ ಅವರಿಗೆ ಪ್ರತಿಷ್ಠಿತ ರಾಜ್ಯಮಟ್ಟದ ಪ್ರಶಸ್ತಿಯನ್ನು ನೀಡಿದೆ. 5 ಲಕ್ಷ ನಗದು ಹಣ, ಚಿನ್ನದ ಪಾರಿತೋಷಕ ಹಾಗೂ ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಯಿತು. ಸಚಿವರಾದ ಸತೀಶ್‌ಜಾರಕಿಹೋಳಿ, ಎಚ್.ಕೆ.ಪಾಟೀಲ್, ಮಾಜಿ ಸಚಿವ ಎಚ್.ಆಂಜನೇಯ, ವಿ.ಎಸ್.ಉಗ್ರಪ್ಪ ಮುಂತಾದ ಗಣ್ಯರು ಉಪಸ್ಥಿತರಿದ್ದರು. ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಕಿಲಾರಿಜೋಗಯ್ಯ, ರಾಜ್ಯದ ಪ್ರತಿಷ್ಠಿತ ಮಹರ್ಷಿವಾಲ್ಮೀಕಿ ಪ್ರಶಸ್ತಿ ದೊರಕಿರುವುದು ಸಂತಸತಂದಿದೆ. ಎರಡನೇ ಬಾರಿ ಚಳ್ಳಕೆರೆ ತಾಲ್ಲೂಕಿಗೆ ಈ ಗೌರವ ಸಲ್ಲಿಕೆಯಾಗುತ್ತಿದೆ. ಈ ಹಿಂದೆಮಾಜಿ ಸಚಿವ ತಿಪ್ಪೇಸ್ವಾಮಿ ಈ ಪ್ರಶಸ್ತಿ ಪಡೆದಿದ್ದರು. ನನ್ನ ಸೇವೆಯನ್ನು ಸರ್ಕಾರ ಗುರುತಿಸಿರುವುದು ಸಂತಸ ತಂದಿದೆ. ಮುಂದಿನ ದಿನಗಳಲ್ಲೂ ಜಾನುವಾರುಗಳ ಸಂರಕ್ಷಣೆ ಕಾರ್ಯ ಮುಂದುವರೆಸುವುದಾಗಿ ತಿಳಿಸಿದರು.

# ಚಳ್ಳಕೆರೆ: ವಾಲ್ಮೀಕಿ ಜಯಂತಿ ಅದ್ದೂರಿ ಮೆರವಣಿಗೆ





» ಚಳ್ಳಕೆರೆ

ರಾಮಾಯಣ ಮಹಾಗ್ರಂಥ ಈ ನಾಡಿಗೆ ನೀಡಿದ ಮಹರ್ಷಿ ವಾಲ್ಮೀಕಿ ಜಂಯತ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಲಾಯಿತು.

ವಾಲ್ಮೀಕಿ ವೃತ್ತದಿಂದ ಬೃಹತ್ ಮೆರವಣಿಗೆಗೆ ಶಾಸಕ ಟಿ.ರಘುಮೂರ್ತಿ ಚಾಲನೆ ನೀಡಿದರು. ಸುಮಾರು ಐದು ಗಂಟೆಗಳ ಕಾಲ ನಗರದ ಅಂಬೇಡ್ಕರ್ ವೃತ್ತ, ನೆಹರೂ ಸರ್ಕಲ್, ಬಳ್ಳಾರಿ ರಸ್ತೆಗಳಲ್ಲಿ ಮೆರವಣಿಗೆ ಸಾಗಿತು. ನೂರಾರು ಯುವಕ, ಯುವತಿಯರು ಡಿಜೆ ಸದ್ದಿಗೆ ಹೆಜ್ಜೆ ಹಾಕುವ ಮೂಲಕ ಮೆರವಣಿಗೆಗೆ ಮತ್ತಷ್ಟು ಮೆರಗು ನೀಡಿದರು. ಕೋಲಾಟ,ಗೊಂಬೆಗುಣಿತ,ಮ್ಯಾಸಬೇಡರ ಕುಣಿತ, ವಿವಿಧ ಕಲಾತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು. ಸಮುದಾಯದ ವಿವಿಧ ಹಂತದ ಮುಖಂಡರು ಮೆರವಣಿಗೆ ಉದ್ದಕ್ಕೂ ಸಾಗಿದರು. ಪ್ರತಿವರ್ಷದಂತೆ ಈ ಬಾರಿಯೂ ವಾಲ್ಮೀಕಿ ಪುತ್ಥಳಿಗೆ ವಿವಿಧ ಹೂಗಳಿಂದ ಅಲಂಕರಿಸಲಾಗಿತ್ತು. ಮಹಿಳೆಯರು, ಯುವಕರು, ಮಕ್ಕಳು ಸಿಂಗಾರಗೊಂಡ ಪುತ್ಥಳಿ ಮುಂದೆ ನಿಂತು ಫೋಟೋ ಕ್ಲಿಕಿಸಿಕೊಂಡರು. ಮೆರವಣಿಗೆಯಲ್ಲಿ ಸಮುದಾಯದ ನೂರಾರು ಪಾಲ್ಗೊಂಡು ಡಿಜೆ ಹಾಡುಗಳಿಗೆ ಕುಣಿದುಕುಪ್ಪಳಿಸಿದರು. ಮೆರವಣಿಗೆಯಲ್ಲಿ ಸಾಗಿದ ಜನರಿಗೆ ತಂಪುಪಾನಿಯ, ಮಜ್ಜಿಗೆ, ನೀರನ್ನು ಸಂದೀಪ್‌ಸೂರ್ಯ ಮತ್ತು ಮಿತ್ರರು, ವಿವಿಧ ಸಂಘಟನೆಗಳು ದಾರಿಯುದ್ದಕ್ಕೂ ವಿತರಿಸಿದರು. ಮೆರವಣಿಗೆಯಲ್ಲಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ವಾಲ್ಮೀಕಿ ಕಲ್ಯಾಣಮಂಟಪ ಟ್ರಸ್ಟ್ ಅಧ್ಯಕ್ಷ ಮಲ್ಲಪ್ಪನಾಯಕ, ಕಾರ್ಯದರ್ಶಿ ಚನ್ನಂಗಿರಂಗಸ್ವಾಮಿ, ದುಗ್ಗಾವರ ತಿಪ್ಪೇಸ್ವಾಮಿ, ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ, ಬಾಳೆಮಂಡಿ ರಾಮದಾಸ್, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ, ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಟಿ.ಶಿವಕುಮಾರ್, ಸುಮ, ಎಸ್.ಜಯಣ್ಣ, ಕವಿತಾನಾಯಕಿ, ಎಂ.ನಾಗಮಣಿ, ಎಂ.ಜೆ.ರಾಘವೇಂದ್ರ, ಸಿ.ಶ್ರೀನಿವಾಸ, ರಮೇಶ್‌ಗೌಡ, ನಾಮಿನಿ ಸದಸ್ಯ ಅನ್ವರ್‌ಮಾಸ್ಟರ್, ಆರ್.ವೀರಭದ್ರ, ನಟರಾಜ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಸಿ.ಟಿ.ಶ್ರೀನಿವಾಸ್, ಕಾಲುವೇಹಳ್ಳಿಶ್ರೀನಿವಾಸ್, ಸಿ.ಟಿ.ವೀರೇಶ್, ಜಯಪಾಲಯ್ಯ, ಜಿ.ವೀರೇಶ್, ಟಿ.ಜೆ.ತಿಪ್ಪೇಸ್ವಾಮಿ, ಸಿ.ಗುರುಸ್ವಾಮಿ, ಸೂರನಾಯಕ, ಬಿ.ತಿಪ್ಪೇಸ್ವಾಮಿ, ಮಹಿಳಾ ಘಟಕದ ಅಧ್ಯಕ್ಷೆ ಯಶೋಧಮ್ಮ, ಕಾರ್ಯದರ್ಶಿ ಸೂರ್ಯಪ್ರಭಾ ಮುಂತಾದವರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮುಂದುವರೆದ ಮಳೆಯ ಅವಾಂತರ: 3 ಮನೆಗಳ ಗೋಡೆ ಕುಸಿದು 2 ಲಕ್ಷಕ್ಕೂ ಹೆಚ್ಚು ನಷ್ಟ



» ಚಳ್ಳಕೆರೆ

ಕಳೆದ ಹಲವಾರು ದಿನಗಳಿಂದನಗರ ಪ್ರದೇಶವೂ ಸೇರಿದಂತೆ ತಾಲ್ಲೂಕಿನಾದ್ಯಂತ ನಿರೀಕ್ಷೆಗೂ ಮೀರಿ ದಾಖಲೆ ಪ್ರಮಾಣದಲ್ಲಿ ಮಳೆಯಾಗುತ್ತಿದ್ದು, ಅನೇಕ ವಾಸದ ಮನೆಗಳು ಹೆಚ್ಚಿನ ತೇವಾಂಶದಿಂದ ಕುಸಿಯುತ್ತಿವೆ. ಗಾಂಧಿನಗರದಲ್ಲಿ ನಿವಾಸಿ ಬಷೀರ್‌ಆಹಮ್ಮದ್‌ಸಾಬ್ ಎಂಬುವವರ ಮನೆಯ ಗೋಡೆ ನೀರಿನಿಂದ ತೊಯ್ದು ಕುಸಿದು ಬಿದ್ದಿದೆ. ಗೋಡೆ ಹಿಂಭಾಗಕ್ಕೆ ಕುಸಿದು ಬಿದ್ದ ಪರಿಣಾಮವಾಗಿ ಮನೆಯಲ್ಲಿದ್ದ ಬಷೀರ್‌ಆಹಮ್ಮದ್ ಮತ್ತು ಅವರ ಪತ್ನಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗೋಡೆಕುಸಿದ ಪರಿಣಾಮ ಇವರಿಗೆ ಸುಮಾರು 60 ಸಾವಿರ ನಷ್ಟ ಸಂಭವಿಸಿದೆ. ತಾಲ್ಲೂಕಿನ ಹಿರೇಹಳ್ಳಿ ಗ್ರಾಮದಲ್ಲಿ ಸೂರಮ್ಮ ಎಂಬುವವರ ಮನೆಯ ಮೇಲ್ಛಾವಣಿ ಕುಸಿದು ಬಿದ್ದು, ಸುಮಾರು 50 ಸಾವಿರ ನಷ್ಟ ಸಂಭವಿಸಿದೆ. ಚೌಳೂರು ಗ್ರಾಮ ಪಂಚಾಯಿತಿ ಬಸವೇಶ್ವರಕಾಲೋನಿಯಲ್ಲಿ ತಿಪ್ಪೀರಮ್ಮ ಎಂಬ ವೃದ್ದೆಯ ಮನೆ ಮೇಲ್ಛಾವಣಿ ಮತ್ತು ಗೋಡೆ ಕುಸಿದು ಬಿದ್ದು ಸುಮಾರು 70 ಸಾವಿರ ನಷ್ಟ ಸಂಭವಿಸಿದೆ. ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

### ಹೊಟ್ಟೆನೋವು: ಇಲಿಪಾಷಣ ಸೇವಿಸಿ ಗೃಹಿಣಿ ಸಾವು

» ಚಳ್ಳಕೆರೆ

ಇಲ್ಲಿನ ವೆಂಕಟೇಶ್ವರ ನಗರದಲ್ಲಿ ವಾಸವಿದ್ದ ಭಾಗ್ಯಲಕ್ಷ್ಮಿ(35) ಎಂಬ ಮಹಿಳೆ ಅ.13ರಂದು ಹೊಟ್ಟೆನೋವನ್ನು ತಾಳದೆ ಇಲಿಪಾಷಣವನ್ನು ಸೇವಿಸಿದ್ದು, ಕೂಡಲೇ ಆಕೆಯನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆ ದಾಖಲಿಸಿದ ನಂತರ ದಾವಣಗೆರೆ ಚಿಗಟೇರಿ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಭಾಗ್ಯಲಕ್ಷ್ಮಿ ಬುಧವಾರ ರಾತ್ರಿ ಮೃತಪಟ್ಟಿರುತ್ತಾಳೆ. ತಾಯಿ ಸರೋಜಬಾಯಿ ಈ ಬಗ್ಗೆ ದೂರು ನೀಡಿ ಮಗಳು ಭಾಗ್ಯಲಕ್ಷ್ಮಿ ಸಾವಿನಲ್ಲಿ ಯಾವುದೇ ಅನುಮಾನವಿಲ್ಲವೆಂದು ತಿಳಿಸಿರುತ್ತಾಳೆ. ಠಾಣಾಧಿಕಾರಿ ಶಿವಣ್ಣ ಪ್ರಕರಣ ದಾಖಲಿಸಿದ್ದಾರೆ.

### ಯಂತ್ರೋಪಕರಣಗಳು ಸಹಾಯ ಧನದಡಿ ಲಭ್ಯ



» ಹೊಸದುರ್ಗ

ಕೃಷಿ ಇಲಾಖೆಯಲ್ಲಿ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆಯುವುದರ ಜೋತೆಗೆ ಇಲಾಖೆಯ ಪಿ.ಎಂ.ಎಫ್.ಎಂ.ಈ ಯೋಜನೆಯಡಿ ಹಲವು ಮೌಲ್ಯವರ್ಧನೆ ಮಾಡುವ ಯಂತ್ರೋಪಕರಣಗಳು ಸಹಾಯಧನದಡಿ ಲಭ್ಯವಿದ್ದು, ಮಹಿಳೆಯರು ಇದರ ಸದುಪೋಗ ಪಡೆದುಕೊಳ್ಳಿ ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಸಿ.ಎನ್.ಈಶ ಕರೆ ನೀಡಿದರು.ಪಟ್ಟಣದ ಕೃಷಿ ಇಲಾಖೆಯ ಆವರಣದಲ್ಲಿ ಆಯೋಜಿಸಲಾಗಿದ್ದ 2024–25ನೇ ಸಾಲಿನ ಆತ್ಮ ಯೋಜನೆ ಕಿಸಾನ್ ಘೋಷ್ಠಿ ಕಾರ್ಯಕ್ರಮದಡಿ ಮಹಿಳಾ ಕಿಸಾನ್ ದಿವಸ್– ಕೃಷಿ ಪರಿವರ್ತನೆಯಲ್ಲಿ ಉದ್ಯಮ ಶೀಲ ಮಹಿಳೆಯರ ಪಾತ್ರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಮಹಿಳೆಯರು ಇಂದು ಪ್ರತಿಯೊಂದು ಕ್ಷೇತ್ರದಲ್ಲಿಯೂ ಸಹಾ ಮುಂದೆ ಬರುತ್ತಿದ್ದಾರೆ ಪ್ರಗತಿಯನ್ನ ಕಾಣುತ್ತಿದ್ದಾರೆ ಇನ್ನು ಹೆಚ್ಚು ಹೆಚ್ಚು ಮಹಿಳೆಯರು ಮುಂದೆ ಬಂದು ಸಮಾಜದ ಮುಖ್ಯವಾಹಿನಿಗೆ ಬರಬೇಕಾಗಿದೆ ಈ ಹಿನ್ನೆಲೆಯಲ್ಲಿ ಮಹಿಳೆಯರಲ್ಲಿ ನಂಬಿಕೆ ಹಾಗೂ ಆತ್ಮಸ್ಥೈರ್ಯ ಮುಖ್ಯ ಎಂದರು.ಶ್ರೀಮತಿ ಸುಮಾ ಸಿ.ಎಂ ಮಾತನಾಡಿ ಸಿರಿಧಾನ್ಯ ಮೌಲ್ಯವರ್ಧನೆ ಬಗ್ಗೆ ವಿವರಿಸಿ ಮಹಿಳೆಯರು ಸ್ವಾಲಂಭಿಯಾಗಬೇಕು, ಬಿತ್ತನೆಯಿಂದ ಕಟಾವಿನ ವರೆಗೆ ಕೃಷಿಯಲ್ಲಿ ರೈತ ಮಹಿಳೆಯರ ಪಾತ್ರ ಸಾಕಷ್ಟಿದ್ದು ಕುಟುಂಬವನ್ನು ನಿರ್ವಹಿಸಲು ಹೆಚ್ಚು ಶ್ರಮ ಪಡುತ್ತಾರೆಂದು ತಿಳಿಸಿದರು.ಶ್ರೀಮತಿ ಮಂಜುಳಾ ಮಾತನಾಡಿ ಮಹಿಳೆಯರುಕೃಷಿಯಜೊತೆಗೆಕೃಷಿಗೆಪೂರಕವಾದ ಜೇನು ಸಾಕಾಣಿಕೆ ಅಣಬೆ ಬೇಸಾಯ, ಅಪ್ಪಳ, ರೊಟ್ಟಿ ಉದ್ಯಮವನ್ನು ತೆರೆದು, ಸ್ವಾಲಂಭಿಯಾಗಿ ತಮ್ಮ ಬದುಕು ಕಟ್ಟಿಕೊಳ್ಳಬೇಕು ಎಂದು ಕರೆ ನೀಡಿದರು.ಕಾರ್ಯಕ್ರಮದಲ್ಲಿ ತಾಲ್ಲೂಕಿನ ನಾಲ್ಕು ಹೋಬಳಿಗಳ ರೈತ ಮಹಿಳೆಯರು, ರೈತ ಉತ್ಪಾದಕ ಕಂಪನಿಯ ಮಹಿಳೆಯರು, ಸ್ತ್ರೀ ಶಕ್ತಿ ಸಂಘದ ಪ್ರತಿನಿಧಿಗಳು ಕೃಷಿ ಅಧಿಕಾರಿಗಳು, ಆತ್ಮ ಸಿಬ್ಬಂದಿ ಭಾಗವಹಿಸಿದ್ದರು.

# ಲಿಂಗ ತಾರತಮ್ಯವಿಲ್ಲದೇ ಜೀವಿಸುವ, ಶಿಕ್ಷಣ ಪಡೆಯುವ ಹಕ್ಕು ಸಮಾನವಾಗಿದೆ: ಮಹಾವೀರ್ ಎಂ.ಕರೆಣ್ಣನವರ್

» ದಾವಣಗೆರೆ



ಲಿಂಗ ಅಸಮಾನತೆ ಇಲ್ಲದೆ ಹೆಣ್ಣಿರಲಿ, ಗಂಡಿರಲಿ ಸಂವಿಧಾನಾತ್ಮಕವಾಗಿ ಜೀವಿಸುವ ಹಾಗೂ ಶಿಕ್ಷಣ ಪಡೆಯುವ ಹಕ್ಕು ಸಮಾನವಾಗಿರುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಎಂ. ಕರೆಣ್ಣನವರ ತಿಳಿಸಿದರು.

ಬುಧವಾರ (ಅ.16) ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ಹಾಗೂ ಲಲಿತಾ ಇಂಟರ್ ನ್ಯಾಷನಲ್ ಶಾಲೆ, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಪ್ರಸಕ್ತ ಸಾಲಿನ ಮಿಷನ್ ಶಕ್ತಿ ಯೋಜನೆಯ ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಯಡಿ ಅಂತರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯ ಪ್ರಯುಕ್ತ ಹೆಣ್ಣು ಮಗುವಿನ ಪ್ರಾಮುಖ್ಯತೆ ಕುರಿತು ಹಮ್ಮಿಕೊಳ್ಳಲಾಗಿದ್ದ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತಾನಾಡಿದರು. ಹೆಣ್ಣು ಭ್ರೂಣ ಹತ್ಯೆ,ಗಂಡು ಮಗು ಬೇಕು ಎಂಬ ಕುಟುಂಬದವರ ಹಂಬಲ, ಇದು ಪರಿಸರಕ್ಕೆ ವಿರುದ್ಧವಾದ ಚಟುವಟಿಕೆಯಾಗಿದೆ. ಅಪ್ರಾಪ್ತ ವಯಸ್ಸಿನ ಗಂಡು ಮತ್ತು ಹೆಣ್ಣು ಮಕ್ಕಳ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆಯನ್ನು ಮಾಡುವುದರ ಕುರಿತು ಪೋಕ್ಸೋ ಕಾಯ್ದೆಯಲ್ಲಿನ ಕಾನೂನುಗಳ ಕುರಿತು ಮಕ್ಕಳಿಗೆ ತಿಳುವಳಿಕೆ ನೀಡುತ್ತಾ, ಈ ರೀತಿಯ ಯಾವುದಾದರೂ ಪ್ರಕರಣಗಳು ಕಂಡು ಬಂದಲ್ಲಿ 1098 ಮಕ್ಕಳ ಸಹಾಯವಾಣಿಗೆ, 112 ಏಕ ತುರ್ತು ಸಹಾಯವಾಣಿಗೆ ಕರೆ ಮಾಡುವುದರ ಮುಖಾಂತರ ಅಪಾಯದಲ್ಲಿರುವ ಮಕ್ಕಳನ್ನು ರಕ್ಷಣೆ ಮಾಡಬಹುದು ಎಂದು ತಿಳಿಸಿದರು.

ಮಹಿಳೆಯರ ಮೇಲಿನ ಕೌಟುಂಬಿಕ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಕಾನೂನುಗಳು ಇರುವುದರ ಕುರಿತಾಗಿ ಮಾಹಿತಿ ನೀಡಿದರು. ನಮ್ಮ ದೇಶದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಹೆಣ್ಣು ಮಕ್ಕಳಿಗೆ ಉತ್ತಮ ಸ್ಥಾನಮಾನ ನೀಡಿರುತ್ತಾರೆ. ಆದರೆ ಸುತ್ತ ಮುತ್ತಲಿನ ದೇಶಗಳಲ್ಲಿ ಹೆಣ್ಣು ಮಕ್ಕಳಿಗೆ ಪ್ರಾಮುಖ್ಯತೆ ನೀಡಿರುವುದಿಲ್ಲ, ಆದ್ದರಿಂದ ಆ ದೇಶಗಳಲ್ಲಿ ಅಭಿವೃದ್ಧಿ ಹೊಂದಿರುವುದಿಲ್ಲ, ಬೇರೆ ದೇಶಗಳು ಹಿಂದುಳಿಯುವುದಕ್ಕೆ ಇದು ಒಂದು ಪ್ರಮುಖ ಕಾರಣವಾಗಿರುತ್ತದೆ. ಅಂತರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯ ಕಾರ್ಯಕ್ರಮದಲ್ಲಿ ಭಾಗವಹಿಸಿದ ಶಾಲೆಯ ವಿದ್ಯಾರ್ಥಿನಿಯರಿಗೆ ಕಾರ್ಯಕ್ರಮದ ಕುರಿತಾಗಿ 2 ಪುಟಗಳ ಸಾರಾಂಶವನ್ನು ಬರೆದು ತಮಗೆ ಕಳುಹಿಸಿಕೊಡುವಂತೆ ತಿಳಿಸಿದರು.

ಜಿಲ್ಲಾ ವಕೀಲರ ಸಂಘದ ಮಹಿಳಾ ಪ್ರತಿನಿಧಿ ಸದಸ್ಯರಾದ ಭಾಗ್ಯಲಕ್ಷ್ಮಿ ಇವರು ನಾರ್ಯಸ್ತು ಪೂಜ್ಯಂತೆ ರಮಂತೇ ತತ್ರಾ ದೇವತಾ ಎಂದು ಹೇಳುತ್ತಾ ಮಹಿಳೆಯರ ಮತ್ತು ಮಕ್ಕಳ ಸಂವಿಧಾನಾತ್ಮಕ ಹಕ್ಕುಗಳ ಕುರಿತು ಮಾತನಾಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಗರ್ಭಿಣಿ, ಬಾಣಂತಿಯರಿಗೆ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸುತ್ತಿದ್ದಾರೆ. ಮಕ್ಕಳಿಗೆ ಸರಿಯಾದ ಸಮಯದಲ್ಲಿ ಸ್ತನ್ಯಪಾನವನ್ನು ಮಾಡಿಸುವುದರ ಮೂಲಕ ಮಕ್ಕಳ ಶಾರೀರಿಕ, ಬೌದ್ಧಿಕ ಬೆಳವಣಿಗೆಗೆ ಪೂರಕ ವಾತಾವರಣವನ್ನು ನಿರ್ಮಾಣಮಾಡಬೇಕು, ಭೂಮಿತಾಯಿ ಸಕಲ ಜೀವಿಗಳಿಗೆ ಬದುಕಲು ನೆಲ, ಜಲ, ಗಾಳಿ ನೀಡುತ್ತದೆ, ಇದೇ ಸ್ಥಾನ ಹೆಣ್ಣು ಮಕ್ಕಳಿಗಿದ್ದು, ಹೆಣ್ಣು ಮಕ್ಕಳ ಶಿಕ್ಷಣ, ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಮಗು ತಾಯಿಯ ಗರ್ಭದಲ್ಲಿರುವಾಗ ಮತ್ತು ನಂತರ ಬೆಳವಣಿಗೆಯಾಗಲು ತಾಯಿಯ ಆರೈಕೆ ಅತ್ಯಗತ್ಯವಾಗಿದೆ. ಈ ಹಂತದಲ್ಲಿ ತಾಯಿಗೆ ಪೌಷ್ಠಿಕ ಆಹಾರ ಬಹಳ ಮುಖ್ಯವಾಗಿರುತ್ತದೆ. ಮಗು ಹುಟ್ಟುವ ಮುನ್ನ, ನಂತರದ ಬೆಳವಣಿಗೆ ಹಾಗೂ ತನ್ನ ವಿದ್ಯಾಭ್ಯಾಸ ಮಾಡಲು ತಾಯಿಯ ಶ್ರಮ ಸಾಕಷ್ಠಿರುತ್ತದೆ. ಮಕ್ಕಳ ಸುರಕ್ಷಿತ ಮತ್ತು ಅಸುರಕ್ಷಿತ ಸ್ಪರ್ಶದ ಬಗ್ಗೆ, 18 ವರ್ಷದೊಳಗಿನ ಹೆಣ್ಣು ಮಕ್ಕಳ ಮನಸ್ಸು ತುಂಬಾ ಸೂಕ್ಷ್ಮ ಮತ್ತು ಚಂಚಲತೆಯಿಂದ ಕೂಡಿದ್ದು, ಈ ಸಮಯದಲ್ಲಿ ಮನಸ್ಸನ್ನುನಾವೇಹತೋಟಿಯಲ್ಲಿಟ್ಟುಕೊಳ್ಳಬೇಕು, ಅತೀ ಹೆಚ್ಚು ಮೊಬೈಲ್ ಬಳಕೆ ಮಾಡಬಾರದು, ಹೆಣ್ಣು ಯಾವಾಗಲೂ ನಗುನಗುತ್ತಾ ಇರಬೇಕು, ಸ್ತ್ರೀಯರನ್ನು ಗೌರವಿಸಬೇಕು, ಭಾರತವು ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರವಾಗಿದ್ದು, ಈ ರಾಷ್ಟ್ರದಲ್ಲಿ ಹೆಣ್ಣು ಮಕ್ಕಳಿಗೆ ಶೈಕ್ಷಣಿಕವಾಗಿ ಪೂರಕವಾದ ವಾತಾವರಣವನ್ನು ಸೃಷ್ಠಿಸಿ ವಿವಿಧ ರೀತಿಯ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ, ರಾಜಕೀಯ ಆರ್ಥಿಕ ಕ್ಷೇತ್ರದಲ್ಲಿ ನಿರ್ದಿಷ್ಟ ಮೀಸಲಾತಿಯನ್ನು ನೀಡಲಾಗಿದೆ, ಜಾತಿ ಅಸಮಾನತೆ ಉಂಟಾಗಬಾರದೆಂದು ಸಂವಿಧಾನದಲ್ಲಿ ಪ್ರಮುಖ ಮಿಸಲಾತಿಯನ್ನು ನೀಡಲಾಗಿದೆ. ಪ್ಲಾಸ್ಟಿಕ್ ಮುಕ್ತ ರಾಷ್ಟವನ್ನು ಮಾಡುವುದರಲ್ಲಿ ಎಲ್ಲಾ ವಿದ್ಯಾರ್ಥಿನಿಯರು ಕೈ ಜೋಡಿಸಬೇಕು. ಪ್ಲಾಸ್ಟಿಕ್ ಬಳಕೆಯನ್ನು ನಿಲ್ಲಿಸಬೇಕು ಎಂದು ತಿಳಿಸಿದರು.ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಭಿಕುಮಾರ್ ಜಿ.ಎಸ್. ಪ್ರಾಂಶುಪಾಲರಾದ ಮಣಿಕಂಠನ್ ಕೆ.ವಿ., ಲಲಿತಾ ಇಂಟರ್ ನ್ಯಾಷನಲ್ ಶಾಲೆ, ಆಡಳಿತಾಧಿಕಾರಿ ಸುರೇಶ್ ಜಿ.ಪಿ. ಲಲಿತಾ ಇಂಟರ್ ನ್ಯಾಷನಲ್ ಶಾಲೆಯ ವಿದ್ಯಾರ್ಥಿನಿಯರು ಹಾಜರಿದ್ದರು.

## ಘಟಿಸಿದ 21 ದಿನಗಳೊಳಗಾಗಿ ಜನನ, ಮರಣ ಪ್ರಮಾಣ ಪತ್ರ ವಿತರಿಸಿ



» ದಾವಣಗೆರೆ

ಜನನಹಾಗೂಮರಣನೋಂದಣಾಮತ್ತುಉಪನೋಂದಣಾಧಿಕಾರಿಗಳು ಜನನ, ಮರಣ ಘಟಿಸಿದ 21 ದಿನಗಳೊಳಗಾಗಿ ನೊಂದಣಿ ಮಾಡಿ ಪ್ರಮಾಣ ಪತ್ರ ವಿತರಿಸಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಸೂಚನೆ ನೀಡಿದರು. ಅವರು (16) ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ. ಜಿಲ್ಲಾ ಮಟ್ಟದ ನಾಗರಿಕ ನೋಂದಣಿ ಪದ್ಧತಿಯ ಸಮನ್ವಯ ಸಮಿತಿ ಹಾಗೂ ಕೃಷಿ ಅಂಕಿ ಅಂಶಗಳ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜನನ ಮತ್ತು ಮರಣ ನೋಂದಣಿ ಮಾಡುವ ಸಮಯದಲ್ಲಿ ಮರಣ ದಿನಾಂಕ ಹಾಗೂ ನೋಂದಣಿ ಘಟಕವನ್ನು ತಪ್ಪಾಗಿ ಆಯ್ಕೆ ಮಾಡುತ್ತಿರುವುದು. ಮತ್ತು ಬೇರೆಯವರ ಆಧಾರ್ ಜೋಡಣೆ ಮಾಡಿ ಮರಣ ಪ್ರಮಾಣ ವಿತರಿಸುತ್ತಿರುವುದು ಕಂಡು ಬಂದಿದ್ದು, ಈ ರೀತಿಯ ತಪ್ಪುಗಳು ಇನ್ನೂ ಮುಂದೆ ಆಗದಂತೆ ಎಚ್ಚರವಹಿಸಿ ಕೆಲಸ ನಿರ್ವಹಿಸಬೇಕು ಎಂದು ಸೂಚನೆ ನೀಡಿದರು. ಬೆಳೆ ಕಟಾವು ಪ್ರಯೋಗಳನ್ನು ಕೈಗೊಳ್ಳಲು ಕಂದಾಯ, ತೋಟಗಾರಿಕೆ, ಕೃಷಿ ಇಲಾಖೆಯ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಹರಿಹರ 260, ಜಗಳೂರು 482, ದಾವಣಗೆರೆ 362, ಹೊನ್ನಾಳಿ 266, ಚನ್ನಗಿರಿ 428, ನ್ಯಾಮತಿ 212 ಬೆಳೆ ಕಟಾವು ಪ್ರಯೋಗಳನ್ನು ನಿಯೋಜನೆಗೊಳಿಸಲಾಗಿರುತ್ತದೆ. ಇದರಲ್ಲಿ ನಮೂನೆ 1 ಹರಿಹರ 58, ಜಗಳೂರು 20 , ದಾವಣಗೆರೆ 101, ಹೊನ್ನಾಳಿ 82, ಚನ್ನಗಿರಿ 20 ಹಾಗೂ ನ್ಯಾಮತಿ 64 ಬಾಕಿ ಇದ್ದು. ಬಾಕಿ ಇರುವ ಪ್ರಯೋಗಳನ್ನು ಕೂಡಲೇ ಪೂರ್ಣಗೊಳಿಸಬೇಕು. ಹಾಗೂ ನಮೂನೆ 2 ರ ನಿಗಧಿತ ಸಮಯದಲ್ಲಿ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ದಾವಣಗೆರೆ ಜಿಲ್ಲೆಯಲ್ಲಿ ಜನವರಿ 2024 ರಿಂದ ಸೆಪ್ಟಂಬರ್ 2024 ರವರೆಗೆ ಜನನ 4744, ಮರಣ 4985 ಒಟ್ಟು 9729 ಆಗಿರುತ್ತದೆ ಎಂದು ಜಿಲ್ಲಾ ಸಂಖ್ಯಿಕ ಅಧಿಕಾರಿ ನೀಲಾ ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ವಾಲ್ಮೀಕಿ ಜಯಂತಿ ನಗರದಲಿ ಅದ್ದೂರಿ ಮೆರವಣಿಗೆ

» ಚಿತ್ರದುರ್ಗ





ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಗುರುವಾರ ನಗರದಲ್ಲಿ ನಡೆದ ವಾಲ್ಮೀಕಿ ಭಾವಚಿತ್ರ ಹಾಗೂ ಪುತ್ಥಳಿ ಮೆರವಣಿಗೆ ವಿವಿಧ ಜಾನಪದ ಕಲಾತಂಡಗಳ ಸಮ್ಮುಖದಲ್ಲಿ ಸಡಗರ–ಸಂಭ್ರಮದಿಂದ ಭವ್ಯ ಮೆರವಣಿಗೆ ನಡೆಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ನಗರಸಭೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ನಾಯಕ ಸಮಾಜದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಾಲ್ಮೀಕಿ ಭಾವಚಿತ್ರ ಹಾಗೂ ಪುತ್ಥಳಿ ಮೆರವಣಿಗೆಗೆ ನಗರದ ಐತಿಹಾಸಿಕ ಕೋಟೆ ಮುಂಭಾಗದಲ್ಲಿ ಚಾಲನೆ ನೀಡಲಾಯಿತು.

ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತಾ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ತಹಶೀಲ್ದಾರ್ ಡಾ.ನಾಗವೇಣಿ, ಜಿಲ್ಲಾ ನಾಯಕ ಸಮಾಜದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ, ಜಿಲ್ಲಾ ಮದಕರಿ ನಾಯಕ ವಿದ್ಯಾಸಂಸ್ಥೆ ಅಧ್ಯಕ್ಷ ಎಸ್.ಸಂದೀಪ್ ಅವರು ವಾಲ್ಮೀಕಿ ಪುತ್ಥಳಿಗೆ ಪುಷ್ಪಾರ್ಪಣೆ ಮಾಡುವುದರ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

ಐತಿಹಾಸಿಕ ಕೋಟೆ ಮುಂಭಾಗದಿಂದ ಆರಂಭವಾದ ಅದ್ದೂರಿ ಮೆರವಣಿಗೆಯು, ಏಕನಾಥೇಶ್ವರಿ ದೇವಸ್ಥಾನ, ಹುಚ್ಚಂಗಿಯಲ್ಲಮ್ಮ ದೇವಸ್ಥಾನದ ಮುಂಭಾಗದಿಂದ ಆನೆಬಾಗಿಲು, ಗಾಂಧಿವೃತ್ತ, ಎಸ್‌ಬಿಐ ವೃತ್ತ, ಪ್ರವಾಸಿ ಮಂದಿರ ಮಾರ್ಗವಾಗಿ ಅಂಬೇಡ್ಕರ್ ವೃತ್ತ, ಮದಕರಿ ನಾಯಕ ವೃತ್ತದಿಂದ ವೇದಿಕೆ ಕಾರ್ಯಕ್ರಮ ನಡೆಯುವ ನಗರದ ತರಾಸು ರಂಗಮಂದಿರದವರೆಗೆ ನಡೆಯಿತು.

ಮೆರವಣಿಗೆಯಲ್ಲಿ ಖಾಸ ಬೇಡರ ಪಡೆ, ಕಹಳೆ ವಾದನ, ತ್ರಾಷ್ ಡೋಲು, ಗೊಂಬೆ ಕುಣಿತ, ಕರಡಿ ಮಜಲು, ಪಟ ಕುಣಿತ ಮೆರವಣಿಗೆಯ ಮೆರಗು ಹೆಚ್ಚಿಸುವ ಮೂಲಕ ಸಾಂಸ್ಕೃತಿಕ ರಂಗವನ್ನು ತುಂಬಿದವು.

ಈ ಸಂದರ್ಭದಲ್ಲಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ದಿವಾಕರ್, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕಿ ಟಿ.ಎಸ್. ಮಂಜುಳ, ನಗರಸಭೆ ಆಯುಕ್ತೆ ರೇಣುಕಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಪಶುಸಂಗೋಪನೆ ಇಲಾಖೆ ಉಪನಿರ್ದೇಶಕ ಡಾ.ಕುಮಾರ್ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು, ಸಮಾಜದ ಬಾಂಧವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರಾಮಾಯಣದಲ್ಲಿನ ತತ್ವಾದರ್ಶ, ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು; ಡಾ.ಪ್ರಭಾ

» **ದಾವಣಗೆರೆ**

ರಾಮಾಯಣದಲ್ಲಿನ ತತ್ವಾದರ್ಶ ಹಾಗೂ ಅದರಲ್ಲಿನ ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಲೋಕಸಭಾ ಸದಸ್ಯರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು (17) ಜಿಲ್ಲಾಡಳಿತ ,ಜಿಲ್ಲಾ ಪಂಚಾಯತ್ ,ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ,ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದಲ್ಲಿ ಗುರುವಾರ ಆಯೋಜಿಸಲಾಗಿದ್ದ. ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಭವನದ ನಿರ್ಮಾಣಕ್ಕೆ ರೂ. 20 ಲಕ್ಷ, ಹೋಬಳಿ ಮತ್ತು ಪಟ್ಟಣ ಪಂಚಾಯಿತಿ ಮಟ್ಟದಲ್ಲಿ 75 ಲಕ್ಷ ,ತಾಲೂಕು ಮಟ್ಟದಲ್ಲಿ 200 ಲಕ್ಷ ಮತ್ತು ಜಿಲ್ಲಾ ಮಟ್ಟದಲ್ಲಿ ಭವನ ನಿರ್ಮಾಣ ಮಾಡಲು ರೂ. 400 ಲಕ್ಷ ನಿಗದಿ ಮಾಡಲಾಗಿದೆ ಎಂದು ತಿಳಿಸಿದರು.



ಪ್ರಧಾನ ಮಂತ್ರಿ ಆದಿ ಆದರ್ಶ ಗ್ರಾಮ ಯೋಜನೆಯಡಿಯಲ್ಲಿ ಪ್ರಥಮ ಹಂತದಲ್ಲಿ 7 ಗ್ರಾಮಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಹಾಗೂ ಎಲ್ಲಾ ತರಹದ ಅಭಿವೃದ್ಧಿ ಕಾಮಗಾರಿಗಳನ್ನು ಇಲ್ಲಿ ಅನುಷ್ಠಾನಗೊಳಿಸಲಾಗುತ್ತದೆ ಎಂದು ತಿಳಿಸಿದರು. ಪ್ರಧಾನ ಮಂತ್ರಿ ಜನಜಾತಿಯ ಉನ್ನತ ಗ್ರಾಮ ಯೋಜನೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಜಿಲ್ಲೆಯ 44 ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. ಈ ಗ್ರಾಮಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳು ನಡೆಯಬೇಕಿದೆ ಎಂದು ತಿಳಿಸಿದರು.

ಮಾಯಕೊಂಡ ಕ್ಷೇತ್ರ ಶಾಸಕರಾದ ಕೆ.ಎಸ್ ಬಸವಂತಪ್ಪ ಮಾತನಾಡಿ. ವಾಲ್ಮೀಕಿ ಜಯಂತಿ ಕೇವಲ ಒಂದು ಸಮುದಾಯಕ್ಕೆ ಸೀಮಿತವಲ್ಲ. ಇದನ್ನು ಇಡೀ ಮಾನವ ಕುಲ ಆಚರಿಸುವಂತಹ ಕಾರ್ಯಕ್ರಮವಾಗಿದೆ ಎಂದು ತಿಳಿಸಿದರು. ಹಿಂದುಳಿದ ವರ್ಗದಲ್ಲಿ ಹುಟ್ಟಿ, ತನ್ನದೇ ಆದ ಮಹತ್ವವನ್ನು ನಿರೂಪಿಸಿದ ಇವರ ಸಾಹಿತ್ಯ ಪ್ರಪಂಚ ಇರೋವರೆಗೂ ಪ್ರಸ್ತುತವಾಗಿರುತ್ತದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಗಂಗಾಧರ್ ಸ್ವಾಮಿ ಜಿ.ಎಂ ಮಾತನಾಡಿ. ನಮ್ಮ ಸಂಸ್ಕೃತಿ ಮತ್ತು ಪಾಶ್ಚಿಮಾತ್ಯ ಪ್ರದೇಶಗಳ ಸಂಸ್ಕೃತಿ ರಾಮಾಯಣದಿಂದ ರಚಿತವಾಗಿದೆ. ಭಾರತದ ಯಾವುದೇ ಮೂಲೆಗೆ ಹೋದರೂ ಇಲ್ಲಿ ನಮ್ಮ ಸಂಸ್ಕೃತಿ ವಿಸ್ತಾರವಾಗಿದೆ ಎಂದು ತಿಳಿಸಿದರು.

ಸಂಸ್ಕೃತ ಪುರಾಣದಲ್ಲಿ ಒಂದು ಪ್ರತಿತಿಯಿದೆ, ಯಾರಾದರೂ ವಿಜಯದಶಮಿ ದಿನದಂದು ರಾಮಾಯಣ ಓದಿದರೆ ಅವರಿಗೆ ಸಕಲ ಪುಣ್ಯಗಳು ಪ್ರಾಪ್ತಿಯಾಗುತ್ತದೆ ಎಂಬ ನಂಬಿಕೆ ಇದೆ.

ರಾಮಾಯಣ ಓದುವುದರಿಂದ ಜೀವನದ ಪಾಠ, ವಿದ್ಯೆ, ಶ್ರದ್ದೆಯನ್ನು ನಾವುಗಳು ಅಳವಡಿಸಿಕೊಳ್ಳುವ ಮಹತ್ವದ ಸಂದೇಶವಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮೇಯರ್ ಚಮನ್ ಸಾಬ್ ಕೆ , ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ , ಅಪರ ಜಿಲ್ಲಾಧಿಕಾರಿ ಪಿ.ಎನ್. ಲೋಕೇಶ್ , ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಡಾ. ನವೀನ್ ಸಿ ಮಠದ್, ವಾಲ್ಮೀಕಿ ಸಮಾಜದ ಮುಖಂಡರು, ಅಧ್ಯಕ್ಷರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ನಾಡಿನ ಶ್ರೇಷ್ಠ ಸಂತ ಮಹರ್ಷಿ ವಾಲ್ಮೀಕಿಯವರ ಆದರ್ಶಗಳೇ ನಾಯಕ ಸಮುದಾಯಕ್ಕೆ ಸ್ಪೂರ್ತಿ

» **ಚಳ್ಳಕೆರೆ**

ಅಪಾರಜ್ಞಾನ ಸಂಪತ್ತು ಹೊಂದಿದ್ದ ಮಹರ್ಷಿ ವಾಲ್ಮೀಕಿಯವರು ಸುಮಾರು 24 ಸಾವಿರ ಸಂಸ್ಕೃತ ಶ್ಲೋಕಗಳನ್ನು ರಾಮಾಯಣವಾಗಿ ಪರಿವರ್ತನೆ ಮಾಡಿದಂತಹ ಮಹಾನ್ ಚೇತನ. ನಾಡಿನ ವಾಲ್ಮೀಕಿ ಸಮುದಾಯದ ಸದಾಕಾಲ ಮಹರ್ಷಿ ವಾಲ್ಮೀಕಿಯವರ ತತ್ವಾದರ್ಶಗಳ ಪರಿಪಾಲನೆಯಲ್ಲಿ ತೊಡಗಿಕೊಳ್ಳುವ ಮೂಲಕ ಮಹಾನ್‌ಶಕ್ತಿಗೆ ಗೌರವಸಮರ್ಪಣೆ ಮಾಡಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಗುರುವಾರ ನಗರದ ವಾಲ್ಮೀಕಿ ಕಲ್ಯಾಣಮಂಟಪದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮತ್ತು ಸಮುದಾಯದ ಮುಖಂಡರು ಹಮ್ಮಿಕೊಂಡಿದ್ದ ಶ್ರೀಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಸಾವಿರಾರು ವರ್ಷಗಳ ಹಿಂದೆಯೇ ಮಾನವೀಯ ಮೌಲ್ಯ, ಸಮಾನತೆ, ಸೌಹಾರ್ಧತೆಯ ಬಗ್ಗೆ ಜನರಲ್ಲಿ ಧಾರ್ಮಿಕ ಜಾಗೃತಿ ಮೂಡಿಸಿದ ಮಹರ್ಷಿ ವಾಲ್ಮೀಕಿಯವರು ಸಮಸ್ತ ಮಾನವ ಸಮಾಜಕ್ಕೆ ಆದರ್ಶಪ್ರಾಯರು. ವಾಲ್ಮೀಕಿಯವರ ಚಿಂತನೆಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಇಂದು ನಾವೆಲ್ಲರೂ ಮಗರ್ಷಿ ವಾಲ್ಮೀಕಿಯವರ ಜಯಂತಿ ಕಾರ್ಯಕ್ರಮದಮೂಲಕ ಅವರು ನಾಡಿಗೆ ಸಲ್ಲಿಸಿದ ಸೇವೆಗಳನ್ನು ಸ್ಮರಿಸುವ ಕಾರ್ಯ ಮಾಡಲಾಗುತ್ತಿದೆ. ಸರ್ಕಾರ ವಾಲ್ಮೀಕಿಯವರ ಚಿಂತನೆಗಳನ್ನು ಕಾರ್ಯರೂಪಕ್ಕೆ ತರುವ ನಿಟ್ಟಿನಲ್ಲಿ ಯಶಸ್ವಿಹೆಜ್ಜೆ ಇಟ್ಟಿದೆ. ಪ್ರಸ್ತುತ ವರ್ಷ ವಾಲ್ಮೀಕಿ ಸಮುದಾಯದಲ್ಲಿ ತಮ್ಮ ಸೇವಾಕಾರ್ಯದ ಮೂಲಕ ಗುರುತಿಸಿಕೊಂಡ ಐವರಿಗೆಮಹರ್ಷಿ ವಾಲ್ಮೀಕಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ ಎಂದರು.



ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸವಿಭಾಗದ ಸಹಪ್ರಾಧ್ಯಾಪಕಿ ಡಾ.ಜಯಮ್ಮ, ಮಹರ್ಷಿ ವಾಲ್ಮೀಕಿಯವರ ಬದುಕನ್ನು ಅರ್ಥಗರ್ಭಿತವಾಗಿ ವಿವರಿಸಿದರು.

ವಾಲ್ಮೀಕಿ ಕಲ್ಯಾಣಮಂಟಪ ಟ್ರಸ್ಟ್ ಅಧ್ಯಕ್ಷ ಎಚ್.ಎಂ.ಮಲ್ಲಪ್ಪನಾಯಕ, ಕಾರ್ಯದರ್ಶಿ ದುಗ್ಗಾವರ ತಿಪ್ಪೇಸ್ವಾಮಿ, ಚನ್ನಂಗಿರಂಗಸ್ವಾಮಿ, ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ, ಬಿಜೆಪಿ ಮುಖಂಡರಾದ ಬಾಳೆಮಂಡಿರಾಮದಾಸ್, ಡಾ.ನಾಗೇಂದ್ರನಾಯಕ, ನಗರಸಭಾ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಸದಸ್ಯ ಎಸ್.ಜಯಣ್ಣ, ವೆಂಕಟೇಶ್, ರಮೇಶ್‌ಗೌಡ, ಕೆ.ವೀರಭದ್ರಪ್ಪ, ಸುಮಭರಮಣ್ಣ, ಸಿ.ಶ್ರೀನಿವಾಸ್, ಸಿ.ಟಿ.ವೀರೇಶ್, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಸಿ.ನಾಗರಾಜು, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಎಂ.ಟಿ.ಶಿವರಾಜು, ಪೌರಾಯುಕ್ತ ಜಗರೆಡ್ಡಿ, ಇಒ ಶಶಿಧರ, ಮಹಿಳಾ ಸಂಘದ ಅಧ್ಯಕ್ಷೆ ಯಶೋಧಮ್ಮ, ಕಾರ್ಯದರ್ಶಿ ಸೂರ್ಯಪ್ರಭಾ, ಎಲ್‌ಐಸಿತಿಪ್ಪೇಸ್ವಾಮಿ, ಸೌಭಾಗ್ಯಮ್ಮ, ಬಿಇಒ ಕೆ.ಎಸ್.ಸುರೇಶ್, ಸೂರನಾಯಕ, ಜೆ.ರಘುವೀರನಾಯಕ, ಸಿ.ಟಿ.ಶ್ರೀನಿವಾಸ್, ಡಾ.ಲೋಕೇಶ್, ಸಿ.ಗುರುಸ್ವಾಮಿ, ಸಂದೀಪನಾಯಕ, ಪಿ.ತಿಪ್ಪೇ ಸ್ವಾಮಿ, ಬಡಗಿಪಾಪಣ್ಣ, ಡಾ.ಜಿತಿಪ್ಪೇಸ್ವಾಮಿ, ಡಾ.ಲೋಕೇಶ್, ಟಿ.ಜೆ.ತಿಪ್ಪೇಸ್ವಾಮಿ, ಗಾಡಿತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

## ಉಪಚುನಾವಣೆಗೆ ಕಾಂಗ್ರೆಸ್ ಸಿದ್ಧ: ಸಿದ್ದರಾಮಯ್ಯ

**ಬೆಂಗಳೂರು:** ನವೆಂಬರ್ ತಿಂಗಳಲ್ಲಿ ರಾಜ್ಯದಲ್ಲಿ ನಡೆಯಲಿರುವ ಉಪ ಚುನಾವಣೆಗೆ ಕಾಂಗ್ರೆಸ್ ಪಕ್ಷ ಸಮರ್ಥವಾಗಿ ಎದುರಿಸಲಿದ್ದು, ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಗುರುವಾರ ವಿಧಾನಸೌಧ ದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಕೇಂದ್ರ ಸರ್ಕಾರದ ಅಧೀನದಲ್ಲಿ ಬರುವ ಸಿಬಿಐ, ಇಡಿ, ಐಟಿ ಸೇರಿದಂತೆ ಯಾವುದೇ ಸಂಸ್ಥೆಗಳು ನಿಷ್ಪಕ್ಷಪಾತ ವಾಗಿ ಕಾರ್ಯನಿರ್ವಹಿಸಬೇಕೇ ಹೊರತು ಒಂದು ರಾಜಕೀಯ ಪಕ್ಷದ ಪರವಾಗಿ ಕೆಲಸ ಮಾಡಬಾರದು ಎಂದು ತಿಳಿಸಿದರು.

## ಸಿದ್ದರಾಮಯ್ಯ ಹಗರಣಗಳ ಡಾನ್: ಪರಿಷತ್ ಸದಸ್ಯ ಕೆಎಸ್ ನವೀನ್



» **ಚಿತ್ರದುರ್ಗ**

ಸಿದ್ದರಾಮಯ್ಯ ಹಗರಣಗಳ ಡಾನ್ ಎಂದು ಎಂ ಎಲ್ ಸಿ ಕೆ ಎಸ್ ನವೀನ್ ವಗ್ದಾಳಿ ನಡೆಸಿದ್ದಾರೆ. ಚಿತ್ರದುರ್ಗದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ನಡೆಸಿದ ಎಂ.ಎಲ್.ಸಿ ಕೆ.ಎಸ್ ನವೀನ್ ಅವರು ಮಾತನಾಡಿ ಶ್ರೀ ವಾಲ್ಮೀಕಿ ರಚಿಸಿರುವ ರಾಮಾಯಣವು ನಮ್ಮ ದೇಶಕ್ಕೆ ಭದ್ರ ಬುನಾದಿಯನ್ನು ಹಾಕಿಕೊಟ್ಟಿದೆ.ಈ ಹಿಂದೆ ಬಿ.ಎಸ್ ಯಡಿಯೂರಪ್ಪ ರವರ ನೇತೃತ್ವ ಬಿಜೆಪಿ ಸರ್ಕಾರ ಶ್ರೀ ವಾಲ್ಮೀಕಿ ಜಯಂತಿ ಆಚರಣೆಯನ್ನು ಜಾರಿಗೆ ತಂದಿತು.ಬಿಜೆಪಿ ಪಕ್ಷದ ಸರ್ಕಾರ ಅವಧಿಯಲ್ಲಿ ಎಸ್‌ಟಿ ವರ್ಗದ ಜನರಿಗೆ ತಮ್ಮದೇ ಕೊಡುಗೆಯನ್ನು ನೀಡುತ್ತಾ ಬಂದಿದ್ದಾರೆ.. ಆದರೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ 7–8 ತಿಂಗಳಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಕೋಟ್ಯಾಂತರ ರೂ ಹಗರಣ ಮಾಡಿದ್ದಾರೆ.ವಾಲ್ಮೀಕಿ ಸಮುದಾಯದ ಜನರ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಸ್ವಂತ ಬಳಕೆ ಮಾಡುವುದರ ಜೊತೆಗೆ ಲೋಕಸಭಾ ಚುನಾವಣೆ ಹಾಗೂ ತೆಲಂಗಾಣ ಚುನಾವಣೆಗೆ ಬಳಕೆಯಾಗಿರೋದು ಸ್ಪಷ್ಟವಾಗಿ ಗೋಚರವಾಗುತ್ತದೆ. ಯಾರ ಬದುಕಿಗೆ ಬೆಳಕಾಗಬೇಕಾಗಿತ್ತೋ. ಯಾರ ಬದುಕಿಗೆ ಭದ್ರಬುನಾಡಿಯಾಗ ಬೇಕಾಗಿತ್ತು ಆ ಹಣವನ್ನು ಅವರು ತಮ್ಮ ಐಷಾರಾಮಿ ಜೀವನ ನಡೆಸುವುದಕ್ಕೆ ಬಳಸಿಕೊಂಡಿದ್ದಾರೆ ಎಂದು ದೂರಿದರು.

ಸಿದ್ದರಾಮಯ್ಯ ಅಥವಾ ಈ ಸರ್ಕಾರಕ್ಕೆ ಶ್ರೀ ವಾಲ್ಮೀಕಿ ಜಯಂತಿಯನ್ನು ಮಾಡುವ ನೈತಿಕತೆ ಇಲ್ಲ.. ಅವರು ಆ ನೈತಿಕತೆಯನ್ನು ಕಳೆದುಕೊಂಡಿದ್ದಾರೆ.ಎಸ್‌ಟಿ ಸಮುದಾಯದ ವಿದ್ಯಾರ್ಥಿಗಳ ಹಣವನ್ನು ದುರುಪಯೋಗ ಮಾಡಿಕೊಂಡಿರುವ ಸಿದ್ದರಾಮಯ್ಯ ಹಾಗೂ ಸರ್ಕಾರ ಎಸ್‌ಟಿ ಸಮುದಾಯದ ಯುವಕರನ್ನು ಆಗ ವಿದ್ಯಾರ್ಥಿಗಳನ್ನು ಕ್ಷಮೆ ಕೇಳಬೇಕಿತ್ತು.ಸರ್ಕಾರದಲ್ಲಿ ಹಣವನ್ನು ಬಳಸಿಕೊಂಡು ರಾಜ್ಯದ ಜನತೆಯನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ.

ಕಾಂಗ್ರೆಸ್ ಸರ್ಕಾರ ಎಸ್ಟಿ ಹಣವನ್ನು ದುರ್ಬಳಕೆ ಮಾಡಿಕೊಂಡು ಬಳ್ಳಾರಿ ಹಾಗೂ ರಾಯಚೂರು ಲೋಕಸಭಾ ಚುನಾವಣೆಗೆ ಎಸ್ಟಿ ಸಮುದಾಯದ ಹಣ ಖರ್ಚು ಮಾಡಿದೆ. ನಾಯಕ ಸಮುದಾಯಕ್ಕೆ ಮೀಸಲಿಟ್ಟ ಹಣವನ್ನ ಮೋಜು ಮಾಡಿದ್ದಾರೆ ಎಂಬುವುದು ಇಡಿ ತನಿಖೆ ಮೂಲಕ ಗೊತ್ತಾಗಿದೆ. ನಾಯಕ ಜನಾಂಗದ ಜನ ಬಳಿ ಹೋಗಿ ಕ್ಷಮೆಯನ್ನ ಕೇಳಿ ವಾಲ್ಮೀಕಿ ಜಯಂತಿ ಮಾಡಬೇಕಿತ್ತು ಅದ್ರೇ ಕಾಂಗ್ರೆಸ್ ಸರ್ಕಾರಕ್ಕೆ ಜಾಹೀರಾತು ಮೂಲಕ ಜನರನ್ನು ದಿಕ್ಕು ತಪ್ಪಿಸುತ್ತಿದ್ದು ವಾಲ್ಮೀಕಿ ಜಯಂತಿಯಂದೆ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು.

**ಪ್ರಮುಖ ಸುದ್ದಿ**

# ಗ್ರಾಹಕರಿಗೆ ಸ್ಪಂದಿಸಿದಲ್ಲಿ ಮಾತ್ರ ಸಹಕಾರ ಸಂಘಗಳ ಅಭಿವೃದ್ಧಿ

» **ದಾವಣಗೆರೆ**

ಸಹಕಾರ ಸಂಘಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಗ್ರಾಹಕರೊಂದಿಗೆ ಉತ್ತಮವಾಗಿ ವ್ಯವಹಾರಿಸಿದಲ್ಲಿ ಮಾತ್ರ ಸಹಕಾರಿ ಸಂಘಗಳು ಪ್ರಗತಿ ಕಾಣಲು ಸಾಧ್ಯ ಎಂದು ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ನಿರ್ದೇಶಕರಾದ ಶೋಭಾ ಉಮೇ□□ಕುಮಾರ್ ತಿಳಿಸಿದರು.

ಅವರು ದಾವಣಗೆರೆ ಜಿಲ್ಲೆಯ ಪತ್ತಿನ ಸಹಕಾರ ಸಂಘಗಳು, ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳು ಹಾಗೂ ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ವ್ಯವಸ್ಥಾಪಕರುಗಳಿಗೆ ಏರ್ಪಡಿಸಲಾದ ಒಂದು ದಿನದ ರಾಜ್ಯ ಮಟ್ಟದ ವಿಶೇಷ ಕಾರ್ಯದಕ್ಷತೆ ತರಬೇತಿ ಶಿಬಿರ ಉದ್ಘಾಟಿಸಿ ಮಾತಾನಾಡಿದರು. ಇಂದಿನ ಸ್ಪರ್ಧಾತ್ಮಕ ಪ್ರಪಂಚದಲ್ಲಿ ಎಷ್ಟೇ ತರಬೇತಿ ಪಡೆದರೂ ಸಾಲದು, ಸಹಕಾರ ಕ್ಷೇತ್ರದಲ್ಲಿ ನಿತ್ಯ ಆಗುತ್ತಿರುವ ಬದಲಾವಣೆಗಳನ್ನು ತಿಳಿದುಕೊಳ್ಳಲು ಪ್ರತಿಯೊಬ್ಬ ಸಿಬ್ಬಂದಿ ಸದಾ ಉತ್ಸುಕರಾಗಬೇಕು, ಅಂಥಹ ಮೂಲ ತತ್ವಗಳನ್ನು ಈ ರೀತಿಯ ತರಬೇತಿಗಳು ಕಲಿಸಿಕೊಡುತ್ತವೆ. ಸಹಕಾರ ಕ್ಷೇತ್ರದಿಂದ ದೇಶದ ಪ್ರಗತಿ ಸಾಧ್ಯ, ಸಹಕಾರ ಕ್ಷೇತ್ರವನ್ನು ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ ಅಧಿಕಾರಿಗಳು, ಸಿಬ್ಬಂದಿಗಳು ತರಬೇತಿ ಕಾರ್ಯಗಾರದ ಪ್ರಯೋಜನ ಪಡೆದುಕೊಂಡು ಸಂಘಗಳ ಪ್ರಗತಿಗೆ ಶ್ರಮಿಸಬೇಕೆಂದು ಕರೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಸಿರಿಗೆರೆ ರಾಜಣ್ಣ ಮಾತಾನಾಡಿ ಜಿಲ್ಲೆಯಲ್ಲಿರುವ ಬಹುತೇಕ ಪತ್ತಿನ ಸಹಕಾರ ಸಂಘಗಳು ಆರ್ಥಿಕವಾಗಿ ಸಬಲಗೊಂಡಿರುತ್ತವೆ ಎಂದರು.ಮುಖ್ಯ ಅತಿಥಿಗಳಾಗಿ ಸಹಕಾರ ಸಂಘಗಳ ಉಪನಿಬಂಧಕರಾದ ಟಿ. ಮಧುಶ್ರೀನಿವಾಸ ಮಾತನಾಡಿ ಜಿಲ್ಲೆಯಲ್ಲಿ ಪತ್ತಿನ ಸಹಕಾರ ಸಂಘಗಳು ಈಗಾಗಲೇ ಗಣಕೀಕರಣಗೊಂಡಿರುತ್ತವೆ.



ಆದರೆ ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳಂತಹ ಮೋಸದ ಘಟನೆಗಳು ಹೆಚ್ಚಾಗುತ್ತಿವೆ. ಇವುಗಳನ್ನು ತಡೆಯುವುದು ಎಲ್ಲಾ ಸಹಕಾರ ಸಂಘಗಳ ಸಿಬ್ಬಂದಿಗಳ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ತಮ್ಮ ಸಂಘದ ಸಾಫ್ಟ್ ವೇರ್ ಎಷ್ಟು ಸುರಕ್ಷಿತ ಎಂಬುದನ್ನು ತಿಳಿದುಕೊಳ್ಳುವ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ ಸೆಕ್ಯುರಿಟಿ ಆಡಿ□□ನ್ನು ಅಳವಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕರಾದ ಆರ್.ಜಿ ಶ್ರೀನಿವಾಸಮೂರ್ತಿ, ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟದ ಉಪಾಧ್ಯಕ್ಷರಾದ ಬೇತೂರು ಟಿ. ರಾಜಣ್ಣ, ನಿರ್ದೇಶಕರಾದ ಡಿ.ಎಂ ಮುರಿಗೇಂದ್ರಯ್ಯ, ಒಕ್ಕೂಟದ ಸಿಬ್ಬಂದಿಗಳಾದ ಕೆ.ಎಂ ಜಗದೀಶ್, ವಿ. ರಂಗನಾಥ, ಆರ್. ಸ್ವಾಮಿ ಮತ್ತಿತರರು ತರಬೇತಿ ಕಾರ್ಯಗಾರದಲ್ಲಿ ಹಾಜರಿದ್ದರು. ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟದ ಮುಖ್ಯ ಕಾರ್ಯನಿರ್ವಹಣಾಧಿಕಾಹಾಲಪ್ಪ ಕೋಡಿಹಳ್ಳಿ, ಕೆ.ಹೆಚ್ ಸಂತೋಷ್‌ಕುಮಾರ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮಳೆಯಿಂದಾಗಿ ಮನೆ ಬಿದ್ದು ಮೃತ ಕುಟುಂಬಕೆ ಶಾಸಕ ಸಾಂತ್ವನ



» **ಚಿತ್ರದುರ್ಗ**

ತಾಲ್ಲೂಕಿನ ಹಿರೇಗುಂಟನೂರು ಹೋಬಳಿ ಈಚಲನಾಗೇನಹಳ್ಳಿ ಗ್ರಾಮದ ವಾಸಿಯಾದ ರಂಗಮ್ಮ ಕೋಂ ತಿಪ್ಪೇಸ್ವಾಮಿ ಇವರು ದಿನಾಂಕ:16 ರಂದು ಬಂದಂತಹ ಮಳೆಯಿಂದಾಗಿ ಮನೆ ಬಿದ್ದು ಮೃತ ಪಟ್ಟಿದ್ದು ಸ್ಥಳಕ್ಕೆ ಶಾಸಕರಾದ ಕೆ ಸಿ ವೀರೇಂದ್ರ ಪಪ್ಪಿ ರವರು ಭೇಟಿ ನೀಡಿ ಮೃತರ ಕುಟುಂಬಸ್ಥರಿಗೆ ಸಾಂತ್ವನ ನೀಡಿದರು. ಮೃತ ಮಹಿಳೆ ರಂಗಮ್ಮ ಸುಮಾರು 63ವರ್ಷ ವಯಸ್ಸಿನವರಾಗಿದ್ದು ಇಬ್ಬರು ಹೆಣ್ಣು,ಇಬ್ಬರು ಗಂಡು ಮಕ್ಕಳನ್ನು ಅಗಲಿದ್ದಾರೆ. ಮೃತ ಮಹಿಳೆ ತನ್ನ ಮಗನೊಂದಿಗೆ ಈ ಮನೆಯಲ್ಲಿ ವಾಸವಾಗಿದ್ದು ತನ್ನ ಮಗ ಕೆಲಸಕ್ಕೆ ತೆರಳಿದ್ದು ತಾನು ಮನೆಯಲಿದ್ದ ಸಂಧರ್ಭದಲ್ಲಿ ಮನೆಯ ಗೋಡೆ ಮತ್ತು ಚಾವಡಿ ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಬೇಟಿ ನೀಡಿದ ಶಾಸಕರಾದ ವೀರೇಂದ್ರ ಪಪ್ಪಿ ರವರು ಈ ಕೂಡಲೇ ಮೃತರ ಕುಟುಂಬದವರಿಗೆ ಪರಿಹಾರ ನೀಡಬೇಕೆಂದು ತಹಶೀಲ್ದಾರರಿಗೆ ಸೂಚಿಸಿದರನ್ವಯ ಕೇಂದ್ರ ಸರ್ಕಾರದ ಎಸ್.ಡಿ.ಆರ್.ಎಫ್/ಎನ್.ಡಿ.ಆರ್.ಎಫ್ ಮಾರ್ಗಸೂಚಿಯಂತೆ ಪ್ರಕೃತಿ ವಿಕೋಪದಿಂದಾಗಿ ಜೀವ ಹಾನಿಯಾದಂತಹ ಸಂದರ್ಭದಲ್ಲಿ ಸದರಿ ಮೃತರ ವಾರಸುದಾರರಿಗೆ ರೂ.4.00 ಲಕ್ಷಗಳನ್ನು ಪಾವತಿ ಮಾಡುವಂತೆ ಆದೇಶಿಸಿರುತ್ತಾರೆ ಹಾಗೂ ರಾಜ್ಯ ಸರ್ಕಾರದ ಆದೇಶದಂತೆ ಮೃತರ ಕುಟುಂಬಕ್ಕೆ ಹೆಚ್ಚುವರಿಯಾಗಿ ರೂ.1.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಆದೇಶಿಸಿದ್ದು ಒಟ್ಟು ರೂ.5.00 ಲಕ್ಷಗಳನ್ನು ಪ್ರಕೃತಿ ವಿಕೋಪದಿಂದಾಗಿ ಜೀವ ಹಾನಿಯಾದಂತಹ ಸಂದರ್ಭದಲ್ಲಿ ಪರಿಹಾರ ಪಾವತಿಸುವಂತೆ ಆದೇಶಿಸಿರುತ್ತಾರೆ. ಪ್ರಯುಕ್ತ ದಿನಾಂಕ 16 ರಂದು ಬಂದಂತಹ ಮಳೆಯಿಂದಾಗಿ ಚಿತ್ರದುರ್ಗ ತಾಲ್ಲೂಕು ಹಿರೇಗುಂಟನೂರು ಹೋಬಳಿ ಈಚಲನಾಗೇನಹಳ್ಳಿ ಗ್ರಾಮದ ವಾಸಿಯಾದ ರಂಗಮ್ಮ ಕೋಂ ತಿಪ್ಪೇಸ್ವಾಮಿ ಇವರು ಮನೆ ಬಿದ್ದು ಮೃತ ಪಟ್ಟಿದ್ದು ಸದರಿಯರ ಕುಟುಂಬಕ್ಕೆ ರೂ.5.00 ಲಕ್ಷಗಳನ್ನು ಮಂಜೂರು ಮಾಡಿ ಕುಟುಂಬದವರಿಗೆ ಆದೇಶ ಪ್ರತಿಯನ್ನು ಶಾಸಕರಾದ ಕೆ ಸಿ ವೀರೇಂದ್ರ ಪಪ್ಪಿ ರವರು ಮತ್ತು ತಹಶೀಲ್ದಾರರಾದ ನಾಗವೇಣಿರವರು ನೀಡಿದರು. ಈ ಸ್ಥಳದಲ್ಲಿ ಪಂಚಾಯಿತಿ ಅಧ್ಯಕ್ಷರಾದ ನಿರ್ಮಲ ದೇವರಾಜ್,ಸದಸ್ಯರಾದ ಸುರೇಶ್,ಮಾಜಿ ಸದಸ್ಯರಾದ ಸಿದ್ದಣ್ಣ,ಜಿಲ್ಲಾ ಕಾಂಗ್ರೆಸ್ ಪದವೀಧರರ ವಿಭಾಗದ ಅಧ್ಯಕ್ಷರಾದ ಪ್ರಕಾಶ್ ರಾಮಾನಾಯ್ಕ್,ಅಲ್ಪ ಸಂಖ್ಯಾತರ ವಿಭಾಗದ ಅಧ್ಯಕ್ಷರಾದ ಸಯ್ಯದ್ ಖುದ್ದೂಸ್ ,ಎಸ್ಸಿ ವಿಭಾಗದ ಅಧ್ಯಕ್ಷರಾದ ಬಿ ಮಂಜುನಾಥ್ ,ಕೆಡಿಪಿ ಸದಸ್ಯರಾದ ನಾಗರಾಜ್,ಜಗದೀಶ್ ಮತ್ತಿತರು ಉಪಸ್ಥಿತರಿದ್ದರು

### ರಸ್ತೆ ಅಗಲೀಕರಣ ಸ್ಥಳಕ್ಕೆ ಸಚಿವ ಡಿ.ಸುಧಾಕರ್ ಭೇಟಿ



» **ಹಿರಿಯೂರು**

ನಗರದ ರಸ್ತೆ ಅಗಲೀಕರಣ ಕಾಮಗಾರಿ ಪ್ರಯುಕ್ತ ಕಟ್ಟಡ ತೆರವು ಕಾರ್ಯಾಚರಣೆ ನಡೆಯುತ್ತಿರುವ ಸ್ಥಳಕ್ಕೆ ಗುರುವಾರ ಸಂಜೆ ಸಚಿವ ಡಿ ಸುಧಾಕರ್ ಭೇಟಿ ನೀಡಿದರು. ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಅಜಯ್ ಕುಮಾರ್,ಮುಖಂಡರಾದ ಸಾದತ್ ಉಲ್ಲಾ, ಗೌರೀಶ್ ನಾಯಕ,ಜಗದೀಶ್, ಪಿಟ್ಲಾಲಿ ರವಿ, ಅನಿಲ್ ಕುಮಾರ್ ಮುಂತಾದವರು ಹಾಜರಿದ್ದರು.

### ಕಲ್ಯಾಣ ಸಮಿತಿ ಪ್ರವಾಸ

» **ಚಿತ್ರದುರ್ಗ**

ಶಾಸಕ ಪಿ.ಎಂ.ನರೇಂದ್ರಸ್ವಾಮಿ ಅಧ್ಯಕ್ಷತೆಯ ಕರ್ನಾಟಕ ವಿಧಾನಮಂಡಲ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಇದೇ ಅ.19 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕೈಗೊಳ್ಳಲಿದೆ. ದಾವಣಗೆರೆ ಜಿಲ್ಲೆಯಿಂದ ಚಿತ್ರದುರ್ಗ ನಗರಕ್ಕೆ ಆಗಮಿಸುವ ಸಮಿತಿ, ಅಂದು ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಸಮುದಾಯ ಅಭಿವೃದ್ಧಿಗಾಗಿ, ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿರುವ ವಿವಿಧ ಯೋಜನೆ ಹಾಗೂ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಸಭೆ ನಡೆಸಲಿದೆ. ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಜನರ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರು ತಮ್ಮ ಮನವಿಗಳನ್ನು ಜಿಲ್ಲಾಧಿಕಾರಿಗಳ ಮುಖಾಂತರ ಸಮಿತಿ ಅಧ್ಯಕ್ಷರಿಗೆ ಸಲ್ಲಿಸಬಹುದಾಗಿದೆ.

## ಫಾಸ್ಟ್ ನ್ಯೂಸ್

### ಅಹಿಂದ ಚಳುವಳಿಯಿಂದ ಪ್ರವಾಸಿ ಮಂದಿರದಲ್ಲಿ ವಾಲ್ಮೀಕಿ ಜಯಂತಿ



» **ಚಿತ್ರದುರ್ಗ**

ಅಹಿಂದ ಚಳುವಳಿ, ಭೂಮಿ ಮತ್ತು ವಸತಿ ಹೋರಾಟ ಸಮಿತಿ, ಕಣಿವೆಮಾರಮ್ಮ ಯುವಕ ಸಂಘದಿಂದ ಪ್ರವಾಸಿ ಮಂದಿರದಲ್ಲಿ ಗುರುವಾರ ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಲಾಯಿತು.ಭೂಮಿ ಮತ್ತು ವಸತಿ ಹೋರಾಟ ಸಮಿತಿ ಅಧ್ಯಕ್ಷ ಸತ್ಯಪ್ಪ ಮಲ್ಲಾಪುರ ಮಾತನಾಡಿ ಮಹರ್ಷಿ ವಾಲ್ಮೀಕಿರವರ ಆದರ್ಶ, ತತ್ವ, ಸಿದ್ದಾಂತವನ್ನು ವಿಶ್ವವೇ ಮೆಚ್ಚುವಂತಿದೆ. ಹಾಗಾಗಿ ವಾಲ್ಮೀಕಿರವರ ಆದರ್ಶವನ್ನು ಎಲ್ಲರೂ ಪಾಲಿಸಬೇಕಿದೆ ಎಂದು ಹೇಳಿದರು.ಲೇಖಕ ಹೆಚ್. ಆನಂದ್‌ಕುಮಾರ್ ಮಾತನಾಡಿ ಬುಡಕಟ್ಟು ಜನಾಂಗದಲ್ಲಿ ಜನಿಸಿದ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿ ಕಾಡಿನಲ್ಲಿ ಭೇಟಿಯಾಡಿಕೊಂಡಿದ್ದರು. ಕೊನೆಗೆ ತಪಸ್ಸಿಗೆ ಕುಳಿತು ವಾಲ್ಮೀಕಿಯಾಗಿ ಅದ್ಬುತ ಕವಿಯಾಗಿ ಹೊರಹೊಮ್ಮಿ ಸೀತಾಮಾತೆಯನ್ನು ಸಲಹಿ ಸ್ತ್ರೀಪರ ಕಾಳಜಿ ತೋರ್ಪಡಿಸಿದರು. ಹಾಗಾಗಿ ವಾಲ್ಮೀಕಿರವರ ಸಂದೇಶ ಪ್ರಪಂಚದಾದ್ಯಂತ ಹರಡಿದೆಎಂದುನುಡಿದರು.ತಾಲ್ಲೂಕುಪಂಚಾಯಿತಿ ಮಾಜಿ ಸದಸ್ಯ ಹನುಮಂತಪ್ಪ ಮಾತನಾಡುತ್ತ ವಿಶ್ವಕ್ಕೆ ವಾಲ್ಮೀಕಿರವರ ಸಂದೇಶಗಳು ತಲಪಿದೆ. ಆದ್ದರಿಂದ ಅವರೊಬ್ಬ ನಿದರ್ಶನ ಕವಿಯಾದರು ಎಂದು ಗುಣಗಾನ ಮಾಡಿದರು.ಕಣಿವೆಮಾರಮ್ಮ ಯುವಕ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಅಹಿಂದ ಚಳುವಳಿ ಅಧ್ಯಕ್ಷ ಟಿ.ಕೆಂಚಪ್ಪ, ಜಗದೀಶ್ ಇನ್ನು ಮುಂತಾದವರು ವಾಲ್ಮೀಕಿ ಜಯಂತಿಯಲ್ಲಿ ಭಾಗವಹಿಸಿದ್ದರು.

### ಕ್ರಿಯಾಶೀಲತೆಯಿಂದ ಮಕ್ಕಳ ಸ್ನೇಹಿಯಾಗಿ ಬೋಧಿಸಿದರೆ ಕಲಿಕೆ ಪರಿಣಾಮಕಾರಿ: ಎಸ್.ಬಸವರಾಜು



» **ಹಿರಿಯೂರು**

ಶಿಕ್ಷಕರು ಕ್ರಿಯಾಶೀಲತೆಯಿಂದ ಮಕ್ಕಳ ಸ್ನೇಹಿಯಾಗಿ ಬೋಧಿಸಿದರೆ ಕಲಿಕೆ ಪರಿಣಾಮಕಾರಿಯಾಗುತ್ತದೆ ಎಂದು ಡಯಟ್ ಉಪನ್ಯಾಸಕ ಎಸ್.ಬಸವರಾಜು ಹೇಳಿದರು.ಶಿಕ್ಷಕರ ವೃತ್ತಿಪರ ಸಾಮರ್ಥ್ಯ ಅಭಿವೃದ್ಧಿಯಲ್ಲಿ ಡಯಟ್‌ನ ಪಾತ್ರ ವಿಷಯದ ಕುರಿತು ನಗರದ ಜ್ಞಾನಭಾರತಿ ಶಿಕ್ಷಣ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳಿಗೆ ಮಂಗಳವಾರ ಡಯಟ್‌ನಲ್ಲಿ ಆಯೋಜಿಸಿದ್ದ ಶೈಕ್ಷಣಿಕ ಚಟುವಟಿಕೆ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.ಶಿಕ್ಷಕರಿಗೆ ಸಹಾನುಭೂತಿ, ಸಂವೇದನಾಶೀಲತೆ ಗುಣ ಅಗತ್ಯವಾಗಿದ್ದು ಮಕ್ಕಳ ಕಲಿಕೆಯಲ್ಲಿನ ಸವಾಲುಗಳನ್ನು ಗುರುತಿಸಿ ಅವರ ಮನಸ್ಥಿತಿ, ಬುದ್ದಿಮಟ್ಟ ಅರ್ಥೈಸಿಕೊಂಡು ಪೂರಕ ಚಟುವಟಿಕೆಗಳನ್ನು ಬಳಸಿ ಬೋಧಿಸುವುದರಿಂದ ಕಲಿಕೆ ಪ್ರಗತಿಯಾಗುತ್ತದೆ.ಮಕ್ಕಳಲ್ಲಿ ವೈಜ್ಞಾನಿಕ ಮತ್ತು ಸ್ಪರ್ಧಾತ್ಮಕ ಮನೋಭಾವನೆ ಬೆಳೆಸುವುದರ ಜತೆಗೆ ಜೀವನ ಮೌಲ್ಯಗಳನ್ನು ಬೆಳೆಸಬೇಕು ಎಂದರು.

ಉಪನ್ಯಾಸಕಿ ಸಿಎಸ್.ಲೀಲಾವತಿ ಮಾತನಾಡಿ ಶಿಕ್ಷಕರ ವೃತ್ತಿಪರ ಅಭಿವೃದ್ಧಿಗೆ ಭಾಷೆ, ವಿಷಯಾಧಾರಿತ, ತಂತ್ರಜ್ಞಾನ ಆಧಾರಿತ ತರಬೇತಿಯನ್ನು ನೀಡಲಾಗುತ್ತದೆ. ವ್ಯಕ್ತಿತ್ವ ವಿಕಸನ, ವೈಜ್ಞಾನಿಕ ಮನೋಭಾವನೆ ಬೆಳೆಸಲು ವಿಜ್ಞಾನ ವಿಚಾರ ಗೋಷ್ಠಿ, ನಾಟಕ, ಜಾನಪದ ನೃತ್ಯ, ಪ್ರಬಂಧ ಸ್ಪರ್ಧೆಗಳನ್ನು ನಡೆಸಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಡಯಟ್ ಪ್ರಾಚಾರ್ಯ ಎಂ.ನಾಸಿರುದ್ದೀನ್,ಉಪನ್ಯಾಸಕಆರ್.ನಾಗರಾಜು, ಜ್ಞಾನಭಾರತಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಧನಂಜಯ, ಉಪನ್ಯಾಸಕರಾದ ಬಸವರಾಜು, ಅರುಣಕುಮಾರಿ ಮತ್ತು ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.

### ಪ್ರಗತಿ ಪರಿಶೀಲನಾ ಸಭೆ

» **ದಾವಣಗೆರೆ**

ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಪಿ.ಎಂ.ನರೇಂದ್ರಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 18 ರಂದು ಮಧ್ಯಾಹ್ನ 1 ಗಂಟೆಗೆ ಜಿಲ್ಲಾ ಪಂಚಾಯತಿಯ ಎಸ್.ಎಸ್.ಮಲ್ಲಿಕಾರ್ಜುನ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯನ್ನು ಆಯೋಜಿಸಲಾಗಿದೆ.

## ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯಲ್ಲಿ ಸಚಿವ ಡಿ.ಸುಧಾಕರ್

# ವಾಲ್ಮೀಕಿ ಮಾನವೀಯ ಮೌಲ್ಯದ ಹರಿಕಾರ





» **ಚಿತ್ರದುರ್ಗ**

ಸ್ವಾತಂತ್ರ್ಯ, ಸಮಾನತೆ, ಸಹೋದರತೆಯ ತತ್ವವನ್ನು ರಾಮಾಯಣ ಮಹಾಕಾವ್ಯದ ಮೂಲಕ ವಿಶ್ವಕ್ಕೆ ಸಾರಿದ ಶ್ರೀ ಮಹರ್ಷಿ ವಾಲ್ಮೀಕಿ ತತ್ವಜ್ಞಾನಿಯಾಗಿ ಮಾನವೀಯ ಮೌಲ್ಯಗಳ ಹರಿಕಾರನಾಗಿ ಕಾಣುತ್ತಾರೆ. ಇವರ ಜೀವನವೇ ಪ್ರಗತಿಯ ಹಾದಿಯಲ್ಲಿ ಹಾಗೂ ಅರಿವಿನ ಮಾರ್ಗದಲ್ಲಿ ಸಾಗಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ನಗರಸಭೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವ ಮಾನವ ಶ್ರೀ ವಾಲ್ಮೀಕಿ ಜಯಂತಿಯಲ್ಲಿ ನಾಯಕ ಜನಾಂಗದವರೇ ಭಾಗವಹಿಸಿ ಅದಕ್ಕೊಂದು ಮೆರಗು ನೀಡುತ್ತಾರೆ ಎಂದರೆ ಆಶ್ಚರ್ಯವೇನಲ್ಲ. ಎಲ್ಲ ಜಯಂತಿಗಳು ಇದಕ್ಕೆ ಹೊರತಾಗಿಲ್ಲ. ಮಹಾನ್ ಮಾನವತ ವಾದಿಗಳ ಜಯಂತಿಯಲ್ಲಿ ಎಲ್ಲಾ ಜಾತಿ-ಜನಾಂಗದವರು ಸೇರುವ ವಾತಾವರಣ ನಿರ್ಮಾಣ ಮಾಡುವ ಅಗತ್ಯವಿದೆ ಎಂದು ತಿಳಿಸಿದರು.

ರಾಮಾಯಣ ಸರ್ವಕಾಲಕ್ಕೂ ಪೂಜ್ಯನೀಯ ಮಹಾಕಾವ್ಯ. ರತ್ನಾಕರನ ಬದುಕಿನಲ್ಲಿ ಮಹತ್ತರವಾದ ತಿರುವೆಂದರೆ ಬೇಟೆಯಿಂದಾಗುವ ಹಿಂಸೆ-ನೋವು-ವಿಷಾದ ಇವುಗಳಿಂದಾದ ಪರಿಣಾಮಗಳು ಅವರಮನಃಪರಿವರ್ತನೆಗೆಕಾರಣವಾದವು. ತ್ರೇತಾಯುಗದ ಮೂಲ ಸಂವೇದನೆಯನ್ನು ಬದುಕಿನ ಮೌಲ್ಯವನ್ನು ಸೋಲು-ಗೆಲವು, ನೋವು-ನಲಿವು ಇವೆಲ್ಲವುಗಳನ್ನು ಒಟ್ಟಾಗಿ ಹಿಡಿದಿಟ್ಟ ದಾರ್ಶನಿಕ ಶಕ್ತಿ ಶ್ರೀ ಮಹರ್ಷಿ ವಾಲ್ಮೀಕಿಯದ್ದು. ಅದು ರಾಮಾಯಣ ರೂಪದಲ್ಲಿ ಹೊರಬಿತ್ತು. ಶ್ರೀ ರಾಮನೇ ಗರ್ಭಿಣಿ ಸೀತೆಯನ್ನು ಸಂಶಯಿಸಿ ಕಾಡಿಗೆ ಅಟ್ಟಿದಾಗ ಆಕೆಗೊಂದು ನೆಲೆ ನೀಡಿದವರು ವಾಲ್ಮೀಕಿ. ಲವ-ಕುಶರ ಜನನ, ಶಿಕ್ಷಣ ಎಲ್ಲವೂ ನಡೆದಿದ್ದು ವಾಲ್ಮೀಕಿ ಕುಟೀರದಲ್ಲಿ. ಲವಕುಶರಿಗೆ ರಾಮಚರಿತೆಯನ್ನು ಕಲಿಸಿ ರಾಮನೆದುರು ಆಡಿಸಿ ತಂದೆ ಮಕ್ಕಳು ಹೆಂಡತಿಯನ್ನು ಒಂದು ಗೂಡಿಸಿದ್ದು ಶ್ರೀ ವಾಲ್ಮೀಕಿ ಎಂದು ತಿಳಿಸಿದರು.

ನಾಯಕ ಜನಾಂಗದಲ್ಲಿ ಶ್ರೀ ವಾಲ್ಮೀಕಿ ಅಷ್ಟೇ ಅಲ್ಲ. ಅನೇಕ ಪುರಾಣ ಪುರುಷರು. ವೀರ ಪರಾಕ್ರಮಿಗಳು, ಸ್ವಾತಂತ್ರ್ಯ ಹೋರಾಟಗಾರರು ಇದ್ದಾರೆ. ಅವರೆಲ್ಲರನ್ನೂ ಈ ಸಂದರ್ಭದಲ್ಲಿ ಸ್ಮರಿಸಬೇಕಾಗುತ್ತದೆ. ಪುರಾಣ ಪುರುಷ ಬೇಡರ ಕಣ್ಣಪ್ಪನು ಶಿವನಿಗೆ ಕಣ್ಣುಗಳನ್ನು ನೀಡಿದ ಮಹಾನ್ ವ್ಯಕ್ತಿ. ತನ್ನ ಹೆಬ್ಬೆರಳನ್ನೇ ಗುರುಕಾಣಿಕೆಯಾಗಿದ್ರೋಣಾಚಾರ್ಯರಿಗೆ ನೀಡಿದ ಏಕಲವ್ಯ, ಶ್ರೀರಾಮನಿಗಾಗಿ ಕಾದು ಕುಳಿತು ಹಣ್ಣುಗಳನ್ನು ನೀಡಿದ ಶಬರಿ. ಅಷ್ಟೇ ಅಲ್ಲ ಭಾರತೀಯ ಸಾಂಸ್ಕೃತಿಕ ಪರಂಪರೆಗೆ ನಾಯಕ ಜನಾಂಗದ ಕೊಡುಗೆ ಸ್ಮರಣೀಯ ಎಂದು ಅಭಿಪ್ರಾಯಪಟ್ಟರು.

ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಮಾತನಾಡಿ, ಮಹರ್ಷಿ ವಾಲ್ಮೀಕಿ ರಾಮಾಯಣ ಮಹಾಕಾವ್ಯ ಸರ್ವಕಾಲಕ್ಕೂ ಪ್ರಸ್ತುತ. ರಾಮಾಯಣ ಮಹಾಕಾವ್ಯದ ತತ್ವಾದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಚಿತ್ರದುರ್ಗ ನಗರದ ಮದಕರಿನಾಯಕ ವೃತ್ತದ ಸಮೀಪದಲ್ಲಿರುವ ವಾಲ್ಮೀಕಿ ಭವನಕ್ಕೆ ಇನ್ನೂ ಅನುದಾನದ ಅವಶ್ಯಕತೆ ಇದೆ ಎಂದು ಸಮಾಜದ ಮುಖಂಡರು ಗಮನಕ್ಕೆ ತಂದಿದ್ದು, ಅನುದಾನ ಮಂಜೂರಾತಿಗೆ ಅಗತ್ಯ ಕ್ರಮವಹಿಸಿ, ಮುಂದಿನ ದಿನಗಳಲ್ಲಿ ವಾಲ್ಮೀಕಿ ಜಯಂತಿಯನ್ನು ವಾಲ್ಮೀಕಿ ಭವನದಲ್ಲಿಯೇ ಆಚರಿಸೋಣ ಎಂದು ತಿಳಿಸಿದ ಅವರು, ನಗರದ ಚಳ್ಳಕೆರೆ ಗೇಟ್‌ನಲ್ಲಿ ವಾಲ್ಮೀಕಿ ವೃತ್ತ ಎಂದು ನಾಮಕರಣ ಮಾಡಲು ನಗರಸಭೆಯಿಂದ



ಕ್ರಮವಹಿಸಲಾಗಿದೆ ಎಂದು ತಿಳಿಸಿದರು.

ಮುಂಬರುವ ಮಾರ್ಚ್ ಅಂತ್ಯದೊಳಗೆ ಸರ್ಕಾರದ ವತಿಯಿಂದ ದುರ್ಗೋತ್ಸವ ಆಚರಣೆ ಮಾಡಲಾಗುವುದು. ಈ ಬಾರಿ ದುಗೋತ್ಸವ ಆಚರಣೆ ಮಾಡುವ ಮೂಲಕ ದುರ್ಗದ ವೈಭವ, ಮದಕರಿ ನಾಯಕರ ಚರಿತ್ರೆಯನ್ನು ಇಡೀ ವಿಶ್ವಕ್ಕೆ ತಿಳಿಸುವ ಕೆಲಸ ದುಗೋತ್ಸವದಲ್ಲಿ ಆಗಲಿದೆ ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ವಾಲ್ಮೀಕಿ ರಚಿಸಿದ ರಾಮಾಯಣ ಜಗತ್ತಿನ ಶ್ರೇಷ್ಠ ಮಹಾಕಾವ್ಯ ಹಾಗೂ ಇಂದಿಗೂ ಪ್ರಸ್ತುತವಾಗಿದೆ ಎಂದು ಹೇಳಿದರು.

ಬುಡಕಟ್ಟು ಸಮುದಾಯ ಆರ್ಥಿಕ, ಸಾಮಾಜಿಕ, ರಾಜಕೀಯ ಹಾಗೂ ಶೈಕ್ಷಣಿಕವಾಗಿ ಮುಖ್ಯವಾಹಿನಿಗೆ ತರಲು ಸರ್ಕಾರ ಹಲವಾರು ಯೋಜನೆಗಳನ್ನು ರೂಪಿಸಿದೆ. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಮೂಲಕ ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದ್ದು, ಈ ಯೋಜನೆಗಳ ಸದುಪಯೋಗ ಪಡೆದುಕೊಂಡು ಅಭಿವೃದ್ಧಿ ಪಥದತ್ತ ಸಾಗಬೇಕು ಎಂದು ತಿಳಿಸಿದರು.

ಹೊಸದುರ್ಗ ತಾಲ್ಲೂಕು ಕಿಟ್ಟದಾಳು ಕಲ್ಪತರು ಸಂಯುಕ್ತ ಪದವಿ ಪೂರ್ವ ಕಾಲೇಜು ಕನ್ನಡ ಉಪನ್ಯಾಸಕ ಡಾ.ಆಂಜನೇಯ ಉರ್ತಾಳ್ ಉಪನ್ಯಾಸ ನೀಡಿ, ವಾಲ್ಮೀಕಿ ಕೇವಲ ಒಂದು ಜಾತಿಗೆ ಅಥವಾ ಸಮುದಾಯಕ್ಕೆ ಸೀಮಿತವಲ್ಲ. ಅವರು ದೀನದಲಿತ, ದಮನಿತರ, ಈ ನೆಲದ ಸಂಸ್ಕೃತಿಯ ಪ್ರತೀಕ ಮತ್ತು ರೂಪಕ. ವಾಲ್ಮೀಕಿ ಜಗತ್ತಿನ ಚರಿತ್ರೆಯಲ್ಲಿ ಮಿಂಚಿ ಮಿನುಗಿದ ದೃವತಾರೆ. ಮಹರ್ಷಿ ವಾಲ್ಮೀಕಿಯೂ ಆದಿಕವಿಯಾಗಿ, ತತ್ವಜ್ಞಾನಿ, ಶಿಕ್ಷಣತಜ್ಞ, ಸಂಸ್ಕೃತಿಯ ಚಿಂತಕ, ರಾಜನೀತಿ ತಜ್ಞ, ಶೋಷಿತರ ನೇತಾರ, ಸಮಾಜ ಸುಧಾರಕ ಹೀಗೆ ಸರ್ವತೋಮುಖ ಅಭಿವೃದ್ಧಿಯ ಚಿಂತಕನಾಗಿ ತನ್ನ ಛಾಪು ಮೂಡಿಸಿದ್ದಾರೆ. ವಿದ್ಯೆ, ಬುದ್ದಿ, ಜ್ಞಾನ, ಶಿಕ್ಷಣ ಕೇವಲ ಒಂದು ವರ್ಗದವರಿಗೆ ಗುತ್ತಿಗೆಯಾದ ಸಂದರ್ಭದಲ್ಲಿ, ಸಮಾಜದ ಕಟ್ಟ ಕಡೆಯ ತಳ ಸಮುದಾಯದಿಂದ ಬಂದಂತಹ ಮಹರ್ಷಿ ವಾಲ್ಮೀಕಿ ಭಾರತಕ್ಕೆ ಮೊಟ್ಟ ಮೊದಲಿಗೆ ರಾಮಾಯಣವೆಂಬ ಮಹಾಕಾವ್ಯವನ್ನು ಕೊಟ್ಟಿದ್ದಾರೆ. ಜನ-ಮೆಚ್ಚಿದ, ಮನ-ಮೆಚ್ಚಿದ ಇಂತಹ ಮಹಾಕಾವ್ಯವನ್ನು ಜಗತ್ತಿನ ಎಲ್ಲಾ ಸರ್ವ ಧರ್ಮಿಯರು ಕೂಡ ಒಪ್ಪಿ ಅಪ್ಪಿಕೊಂಡಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಸಿ.ಚಾರ್ವಿ ಅವರಿಗೆ ರೂ.1 ಲಕ್ಷ ಚೆಕ್‌ನ್ನು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ವಿತರಿಸಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ತೋರಿದ ಸಮಾಜದ ಸಾಧಕರಾದ ದಿನೇಶ್ ಗೌಡಗೆರೆ, ತಿಪ್ಪೇಸ್ವಾಮಿ, ಸಿರುವಲ್ಲಪ್ಪ, ಹನುಮಂತಪ್ಪ ಅವರಿಗೆ ಸನ್ಮಾನಿಸಿ ನೆನಪಿನ ಕಾಣಿಕೆ ನೀಡಲಾಯಿತು ಹಾಗೂ ಜಿಲ್ಲಾಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ, ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತಾ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಸದಸ್ಯ ಅಂಜಿನಪ್ಪ, ನಗರಸಭೆ ಸದಸ್ಯ ದೀಪಕ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ನಗರಸಭೆ ಪೌರಾಯುಕ್ತೆ ರೇಣುಕಾ, ಜಿಲ್ಲಾ ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ ಸೇರಿದಂತೆ ಜಿಲ್ಲಾಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು, ಸಮಾಜದ ಮುಖಂಡರು ಇದ್ದರು.

## ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ವಾಲ್ಮೀಕಿ ಜಯಂತಿ ಆಚರಣೆ



» **ಚಿತ್ರದುರ್ಗ**

ರಾಮಾಯಣದ ಮೂಲಕ ವಿಶ್ವಕ್ಕೆ ಉತ್ತಮ ಸಂದೇಶ ಸಾರಿರುವ ಮಹರ್ಷಿ ವಾಲ್ಮೀಕಿ ಜಯಂತಿಯವರ ಆದರ್ಶ ದೊಡ್ಡದು ಎಂದು ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಪಂಗಡಗಳ ವಿಭಾಗದ ಅಧ್ಯಕ್ಷ ಬಿ.ಮಂಜುನಾಥ್ ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ನಡೆದ ಮಹರ್ಷಿ ವಾಲ್ಮೀಕಿ ಜಯಂತಿಯಲ್ಲಿ ವಾಲ್ಮೀಕಿ ಫೋಟೋಗೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು. ವಾಲ್ಮೀಕಿಯವರಂತೆಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಎಲ್.ಜಿ.ಹಾವನೂರ್‌ರವರನ್ನು ಈ ಸಂದರ್ಭದಲ್ಲಿ ನೆನಪಿಸಿಕೊಳ್ಳಬೇಕು.

ಮಹರ್ಷಿ ವಾಲ್ಮೀಯನ್ನು ಕೆಲವು ರಾಜಕಾರಣಿಗಳು ಹೈಜಾಕ್ ಮಾಡಲು ಹೊರಟಿದ್ದಾರೆ. ಹಳ್ಳಿ ಹಳ್ಳಿಗೆ ಹೋಗಿ ಪಕ್ಷವನ್ನು ತಳಮಟ್ಟದಿಂದ ಸಂಘಟಿಸಬೇಕು ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಮಾತನಾಡಿ ಇಡಿ ವಿಶ್ವಕ್ಕೆ ರಾಮಾಯಣವನ್ನು ಪರಿಚಯಿಸಿದವರು ಮಹರ್ಷಿ ವಾಲ್ಮೀಕಿ. ಅಂತಹ ಪುಣ್ಯಪುರುಷನನ್ನು ಒಂದು ಜಾತಿಗೆ ಕಟ್ಟಿಹಾಕುವುದು ಸರಿಯಲ್ಲ. ರಾಮನನ್ನು ಆದರ್ಶ ಪುರುಷ ಎಂದು ಬಿಂಬಿಸಿದ್ದು, ವಾಲ್ಮೀಕಿ. ರಾಜಕಾರಣಿಗಳು ಮಹರ್ಷಿ ವಾಲ್ಮೀಕಿಯನ್ನು ಒಂದು ಪಕ್ಷಕ್ಕೆ ಬಳಸಿಕೊಳ್ಳುತ್ತಿರುವುದು ನೋವಿನ ಸಂಗತಿ. ರಾಮನ ಹೆಸರನ್ನು ಕೆಲವರು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ರಾಷ್ಟ್ರಪಿತ ಮಹಾತ್ಮಗಾಂಧಿಜಿ ಹೇರಾಮ್ ಎಂದು ಜಪಿಸುತ್ತಿದ್ದರು. ಮಹರ್ಷಿ ವಾಲ್ಮೀಕಿರವರ ಆದರ್ಶ, ತತ್ವ, ಸಿದ್ದಾಂತಗಳನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದರು.

## ಪ್ರಮುಖ ಸುದ್ದಿ

### ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಬಿ.ಜಿ.ಗೋವಿಂದಪ್ಪ ಅಭಿಮತ

# ರಾಮನನ್ನು ನೆನೆಯುವ ಮುನ್ನ, ಮಹರ್ಷಿ ವಾಲ್ಮೀಕಿ ನೆನೆಯಿರಿ



» **ಹೊಸದುರ್ಗ**

ವಾಲ್ಮೀಕಿ ಮಹರ್ಷಿಗಳು ರಾಮಾಯಣವನ್ನು ರಚಿಸದೆ ಹೋಗದಿದ್ದರೆ, ಜಗತ್ತಿಗೆ ಶ್ರೀರಾಮಚಂದ್ರನ ಪರಿಚಯವಾಗುತ್ತಿರಲಿಲ್ಲ. ರಾಮಾಯಣ ಭಾರತೀಯರಿಗೆ ಪೂಜ್ಯನೀಯವಾದ ಗ್ರಂಥ. ನಾವೆಲ್ಲರೂ ವಾಲ್ಮೀಕಿಯ ಆದರ್ಶ ಮತ್ತು ಶ್ರೀ ರಾಮನ ಸದ್ಗುಣಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಶ್ರೀರಾಮನನ್ನು ನೆನೆಯುವ ಮನ್ನ, ವಾಲ್ಮೀಕಿ ಮಹರ್ಷಿಗಳನ್ನು ನೆನೆಯಬೇಕೆಂದು ಆಹಾರ, ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ, ಶಾಸಕ ಬಿ.ಜಿ. ಗೋವಿಂದಪ್ಪ ಅಭಿಮತ ವ್ಯಕ್ತಪಡಿಸಿದರು.

ಪಟ್ಟಣದ ಅಶೋಕ ರಂಗಮಂದಿರದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್, ಪುರಸಭೆ ಮತ್ತು ಸಮಾಜ ಕಲ್ಯಾಣ ಇಲಾಖೆ, ಹೊಸದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ಆಯೋಜಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಸಮಸ್ಯೆ ಉಂಟಾಗಿದ್ದು, ಸಮುದಾಯದ ಅಭಿವೃದ್ಧಿ ಕಾರ್ಯಗಳು ನಿಧಾನವಾಗಿ ನಡೆಯುತ್ತಿವೆ. ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಕಲ್ಯಾಣ ಇಲಾಖೆಮುಖ್ಯಮಂತ್ರಿಗಳಬಳಿಯೇಇದ್ದು, ಸ್ವಲ್ಪ ದಿನಗಳಲ್ಲಿಯೇ ಫಲಾನುಭವಿಗಳಿಗೆ ನಿಗಮದಿಂದ ಬರುವ ಸೌಲಭ್ಯಗಳನ್ನು ವಿತರಿಸಲಾಗುವುದು. ಸಮುದಾಯದ ಅಪೇಕ್ಷೆಯಂತೆ ಪಟ್ಟಣದಲ್ಲಿ ಮದಕರಿ ನಾಯಕರ ಪುತ್ತಳಿ ನಿರ್ಮಾಣಕ್ಕೆ ಸಿದ್ಧತೆ ನಡೆಯುತ್ತಿದ್ದು, ಅದಕ್ಕೆ ನನ್ನ ಸಂಪೂರ್ಣ ಸಹಕಾರವಿರುತ್ತದೆ ಎಂದರು.

ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ಮಹರ್ಷಿ ವಾಲ್ಮೀಕಿ ಸಂದೇಶವನ್ನು ನಾವು ಒಂದು ದಿನ ಮಾತ್ರ ಸ್ಮರಿಸಿಕೊಳ್ಳದೆ, ವರ್ಷದ 365 ದಿನಗಳು ಕೂಡ ನೆನೆಯಬೇಕು. ಶ್ರೀರಾಮ, ಸೀತೆ, ಲಕ್ಷ್ಮಣ, ಹನುಮಂತನನ್ನು ಪರಿಚಯಿಸಿಕೊಟ್ಟಿದ್ದು ವಾಲ್ಮೀಕಿ ಮಹರ್ಷಿಗಳು. ನಾವು ಬದುಕಬೇಕಾದ ರೀತಿ-ನೀತಿಗಳು ವಾಲ್ಮೀಕಿಯವರ ರಾಮಾಯಣದ ಸಂದೇಶದಲ್ಲಿವೆ. ನಮ್ಮ ಮುಂದಿನ ಪೀಳಿಗೆ ಯಾವ ರೀತಿಯಲ್ಲಿ ಬದುಕಬೇಕೆಂದು ಅದು ತಿಳಿಸಿಕೊಡುತ್ತದೆ. ವಾಲ್ಮೀಕಿ ಮಹರ್ಷಿಗಳು ನಾಯಕ ಜನಾಂಗದಲ್ಲಿ ಹುಟ್ಟಿರಬಹುದು. ಆದರೆ, ಅವರ ಸಂದೇಶಗಳನ್ನು ಸರ್ವ ಜನಾಂಗದವರು ಪಾಲಿಸಬೇಕು. ವಾಲ್ಮೀಕಿಯವರ ವಿಚಾರಗಳನ್ನು ಮುಂದಿನ ದಿನಗಳಲ್ಲಿ ನಮ್ಮ-ಮನೆ ಮನಗಳಲ್ಲಿ ಆರಾಧಿಸುವ ಕಾರ್ಯವಾಗಬೇಕೆಂದು ತಿಳಿಸಿದರು.

ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆಯನ್ನ ಪುರಸಭಾ ಅಧ್ಯಕ್ಷೆ ರಾಜೇಶ್ವರಿ ಆನಂದ್ ವಹಿಸಿದ್ದರು.

ಉಪಾಧ್ಯಕ್ಷೆ ಗೀತಾಗಜೇಂದ್ರ, ತಹಶೀಲ್ದಾರ್ ತಿರುಪತಿ ಪಾಟೀಲ್, ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ನಾಯಕ ಸಮಾಜದ ಅಧ್ಯಕ್ಷ ಕೆ.ಟಿ. ರಂಗನಾಥ್, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಕಾರ್ಯದರ್ಶಿ ರಂಗನಾಥ್, ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ರಾಜ್ಯ ಉಪಾಧ್ಯಕ್ಷ ತುಂಬಿನಕೆರೆ ಬಸವರಾಜ್, ವಾಲ್ಮೀಕಿ ನಾಯಕ ನೌಕರರ ಸಂಘದ ಅಧ್ಯಕ್ಷ ಜಯಪ್ರಕಾಶ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಗಂಗಾಧರಪ್ಪ, ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಬಿ.ಪಿ. ಓಂಕಾರಪ್ಪ, ವಾಲ್ಮೀಕಿ ನಾಯಕ ಯುವಕ ಸಂಘದ ಅಧ್ಯಕ್ಷ ಅರುಣ್ ಗಂಗಾಧರಪ್ಪ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಗೋಪಾಲಸ್ವಾಮಿ, ಸಹಾಯಕ ಕೃಷಿ ನಿರ್ದೇಶಕ ಈಶ, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಆರ್.ಶಾಂತಪ್ಪ, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಶ್ರೀನಿವಾಸ್ ಮತ್ತು ಜಿ.ಪಂ. ಮಾಜಿ ಸದಸ್ಯ ಪರಶುರಾಮಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ನಾಯಕ ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

> ಮಹನೀಯರ ಜಯಂತಿಗಳು ಡಿಜೆ ಹಾಕಿ ಕುಣಿದು ಮುಗಿಸುವ ಕಾರ್ಯಕ್ರಮವಲ್ಲ, ಬದಲಿಗೆ ಮಹನೀಯರ ಆದರ್ಶಗಳನ್ನು ಪಾಲಿಸುವ ಕಾರ್ಯಕ್ರಮವಾಗಬೇಕು. ಮಹರ್ಷಿ ವಾಲ್ಮೀಕಿ ಎಂದರೆ ಬದಲಾವಣೆ, ಆದರ್ಶಗಳ ಸಂಕೇತವಾಗಿದ್ದಾರೆ. ರಾಮಾಯಣದಲ್ಲಿ ಪಿತೃವಾಕ್ಯ ಪರಿಪಾಲನೆ, ಕೌಟುಂಬಿಕ ಸಾಮರಸ್ಯ, ಅಣ್ಣ-ತಮ್ಮಂದಿರ ಸಂಬಂಧ, ಸತಿ-ಪತಿಯ ಬಂಧ ಹೀಗೆಯೇ ಹಲವಾರು ಮಾನವೀಯ ಸಂಬಂಧಗಳ ಬಗ್ಗೆ ಹೇಳಲಾಗಿದೆ. ಮಕ್ಕಳ ಕೈಗೆ ಮೊಬೈಲ್ ಕೊಡುವ ಬದಲು, ರಾಮಾಯಣವನ್ನು ಪುಸ್ತಕಗಳನ್ನು ನೀಡಿದರೆ ಸಮಾಜದಲ್ಲಿ ಆದರ್ಶ ವ್ಯಕ್ತಿಗಳಾಗಿ ಬೆಳೆಯುತ್ತಾರೆ.
>
> » **ತಿರುಪತಿ ಪಾಟೀಲ್. ತಹಸೀಲ್ದಾರ್, ಹೊಸದುರ್ಗ**

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T